# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 17 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 19–07–2023 ಬುಧವಾರ | ಪುಟ: 4 | ಬೆಲೆ : ರೂ.2–00

Volume - 01 Issue - 17 | Title- Code: KARKAN 28269 | Chitradurga | Date: 19-07-2023 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮರ್ಚೆಂಟ್ಸ್ ಬ್ಯಾಂಕ್‌ಗೆ 4.41 ಕೋಟಿ ಲಾಭ 2

ದತ್ತಿ ಇಲಾಖೆ ದೇವಾಲಯಗಳಲ್ಲಿ ಮೊಬೈಲ್ ನಿಷೇಧಿಸಿದ ಸರ್ಕಾರ 3

ಎಂಪಿ ಚುನಾವಣೆಯಲ್ಲಿ ಬಿಜೆಪಿಗೆ ಬಿಪ್ಪು ಗ್ಯಾರಂಟಿ: ಸಚಿವ ತಂಗಡಗಿ 4


**ಚಿತ್ರದುರ್ಗ ಜಿಲ್ಲೆಯ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಎಂ.ಎಸ್.ದಿವಾಕರ್ ವಿಜಯ ನಗರ ಜಿಲ್ಲೆಯ ಜಿಲ್ಲಾಧಿಕಾರಿ ಆಗಿ ನೇಮಿಸಿ ಆದೇಶಿಸಿದೆ. ಕೃಷಿ ಇಲಾಖೆ ಸಹಾಯಕ ನಿರ್ದೇಶಕರಾಗಿದ್ದ ದಿವಾಕರ್ ಅವರು 2022 ಅಕ್ಟೋಬರ್ 21 ರಂದು ಚಿತ್ರದುರ್ಗ ಜಿಲ್ಲಾ ಪಂಚಾಯತಿ ಸಿಇಓ ಆಗಿ ಆಗಮಿಸಿದ್ದರು.**

# ಗ್ರಾಮ ಆಡಳಿತಕ್ಕೆ ಹೊಸ ಆಯಾಮ ನೀಡಿದ

## ಜಿಪಂ ಸಿಇಓ

# ಎಂ.ಎಸ್.ದಿವಾಕರ್

## ವಿಜಯ ನಗರ ಜಿಲ್ಲೆ ಜಿಲ್ಲಾಧಿಕಾರಿಯಾಗಿ ವರ್ಗಾವಣೆ



> ಚಿತ್ರದುರ್ಗ ಜಿಲ್ಲೆಯಲ್ಲಿ ಜನರಿಗೆ ನನ್ನ ಶಕ್ತಿ ಮೀರಿ ಕೆಲಸ ಮಾಡಿದ್ದೇನೆ. ಚಿತ್ರದುರ್ಗ ಜಿಲ್ಲೆ ನನ್ನ ಸ್ವಂತ ಜಿಲ್ಲೆಯಾಗಿದ್ದು ಇಲ್ಲಿ ಸುಧಾರಣೆ ತರುವ ಬಯಕೆ ಇತ್ತು. ಕಡಿಮೆ ಸಮಯದಲ್ಲಿ ನನ್ನ ಇಷ್ಟದಂತೆ ಕೆಲಸ ಕಾರ್ಯ ನಿರ್ವಹಿಸಿದ್ದೇನೆ. ಅಧಿಕಾರಿಗಳು ಜನಪರವಾಗಿ ಕೆಲಸ ಮಾಡಬೇಕು. ಮುಂದಿನ ದಿನದಲ್ಲಿ ಅವಕಾಶ ದೊರತರೆ ಮರಳಿ ಚಿತ್ರದುರ್ಗಕ್ಕೆ ಆಗಮಿಸುವ ಬಯಕೆ ಇದೆ.
>
> » **ಎಂ.ಎಸ್.ದಿವಾಕರ್ ಜಿಲ್ಲಾಧಿಕಾರಿಗಳು ವಿಜಯನಗರ ಜಿಲ್ಲೆ**

**ನಮ್ಮ ಜನ ವಿಶೇಷ**

ಕೋಟೆ ನಾಡು ಜಿಲ್ಲೆಯ ಅನೇಕ ಅಧಿಕಾರಿಗಳು ಕಾರ್ಯ ನಿರ್ವಹಣೆ ಮಾಡಿದ್ದಾರೆ. ವಿಶೇಷ ಕಾರ್ಯಕ್ರಮಗಳ ಮೂಲಕ ಸ್ವಲ್ಪ ಸುಧಾರಣೆ ಮಾಡುವ ಹಂಬಲ, ಸ್ವಂತ ಜಿಲ್ಲೆಗೆ ಏನಾದರೂ ಕೊಡುಗೆ ನೀಡಬೇಕು ಎಂಬ ಉತ್ಸಾಹದೊಂದಿಗೆ ಆಗಮಿಸಿ ಪಂಚ ಕಾರ್ಯಕ್ರಮಗಳ ಮೂಲಕ ಜಿಲ್ಲೆಯ ಜನರಿಗೆ ಸರ್ಕಾರಿ ಕಾರ್ಯಕ್ರಮಗಳನ್ನು ಮನೆ ಬಾಗಿಲಿಗೆ ಕೊಟ್ಟ ಖಡಕ್ ಅಧಿಕಾರಿ ಜಿಲ್ಲಾ ಪಂಚಾಯತಿ ಸಿಇಓ ಆಗಿ ಕಾರ್ಯನಿರ್ವಹಿಸಿದ ವರ್ಗಾವಣೆ ಆಗಿ ವಿಜಯನಗರ ಜಿಲ್ಲೆಯ ನೂತನ ಜಿಲ್ಲಾಧಿಕಾರಿ ಆಗಿರುವ ಎಂ.ಎಸ್.ದಿವಾಕರ್ ಎಂದರೆ ತಪ್ಪಾಗಲಾರದು.

ರಾಜ್ಯ ಸರ್ಕಾರ ಗ್ರಾಮೀಣಾಭಿವೃದ್ಧಿ ಇಲಾಖೆ ಮುಖಾಂತರ ಅನೇಕ ನೂತನ ಕಾರ್ಯಕ್ರಮ ಪರಿಚಯಿಸುವ ಮೂಲಕ ಸಾಮಾಜಿಕ ಬದಲಾವಣೆಗೆ ಸಹಕಾರಿಯಾಗುವ ಉದ್ದೇಶ ಹೊಂದಿದೆ. ಆದರೆ ಎಲ್ಲಾ ಕಡೆಗಳಲ್ಲಿ ಸರ್ಕಾರಿ ಕಾರ್ಯಕ್ರಮ ಜನರಿಗೆ ಮುಟ್ಟಿಸುವ ಕೆಲಸ ಆಗುವುದಿಲ್ಲ.ಆದರೆ ಚಿತ್ರದುರ್ಗ ಜಿಲ್ಲೆಗೆ ಜಿಲ್ಲಾ ಪಂಚಾಯತ ಸಿಇಓ ಆಗಿ 2022 ಅಕ್ಟೋಬರ್ 21 ರಂದು ಆಗಮಿಸಿದ ಎಂ.ಎಸ್.ದಿವಾಕರ್ ಅವರು ಜಿಡ್ಡು ಗಟ್ಟಿದ ಜಿಲ್ಲಾ ಪಂಚಾಯತಿಗೆ ಚುರುಕು ಮುಟ್ಟಿಸುವ ಕೆಲಸ ಮಾಡಿದರು. ಜಿಲ್ಲಾ ಪಂಚಾಯತಿನ ಕೆಲಸ ಕಾರ್ಯಗಳಿಗೆ ವೇಗ ನೀಡಿದರು. ಏನೋ ಒಂದು ಮಾಡಿದರೇ ಸಾಕು ನಡೆಯುತ್ತೆ ಎನ್ನುವ ಅಧಿಕಾರಿಗಳಿಗೆ ಕಾನೂನು ಪಾಠ ಮಾಡಿ ಮೈಚಳಿ ಬಿಡಿಸುವ ಮೂಲಕ ಇಲಾಖೆಯ ಸುಧಾರಣೆ ಕಡೆ ಹೆಜ್ಜೆ ಹಾಕಿದರು.

ಎಂ.ಎಸ್.ದಿವಾಕರ್ ಅವರಿಗೆ 17 ಜಿಲ್ಲೆಗಳಲ್ಲಿ ಅನೇಕ ಹುದ್ದೆಗಳನ್ನು ನಿರ್ವಹಿಸಿದ ಅನುಭವ ಹೊಂದಿದ ಇವರು ಚಿತ್ರ ಸುಧಾರಣೆಗೆ ಜಿಲ್ಲಾ ಪಂಚಾಯತಿ ಸಿಇಓ ಕೆಲಸ ಹೊಸ ಅನುಭವ ಸಹ ಆಗಿದ್ದರು ಸಹ ನಾನು ವಿದ್ಯಾಭ್ಯಾಸ ಮಾಡಿ ಬೆಳೆದ ಜಿಲ್ಲೆಯಲ್ಲಿ ನಾನು ಇರುವ ಅವಧಿಯಲ್ಲಿ ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ , ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಗ್ರಾಮ ಪಂಚಾಯತಿಗಳ ಸುಧಾರಣೆ ಮಾಡಲು ಅಧಿಕಾರಿಗಳ ತಂಡ ರಚಿಸಿ ಹೊಸ ಬದಲಾವಣೆಗೆ ನಾಂದಿ ಹಾಡಿದರು.

### ಹಣ ಬೇಡಿಕೆಗೆ ಬ್ರೇಕ್ ಹಾಕಿ ಮನೆ ಬಾಗಿಲಗೆ ಈ ಸ್ವತ್ತು ನೀಡಿದ ಕೀರ್ತಿ

ಗ್ರಾಮೀಣ ಪ್ರದೇಶದಲ್ಲಿ ಗ್ರಾಮಠಾಣಾ ವ್ಯಾಪ್ತಿಯಲ್ಲಿ ಬರುವ ನಿವೇಶನ, ಮನೆ, ಶೆಡ್ ಮತ್ತಿತರ ನಿರ್ಮಾಣಗಳ ದೃಢೀಕರಣಕ್ಕಾಗಿ ಅತ್ಯಗತ್ಯವಾಗಿದ್ದ ಈ ಸ್ವತ್ತು ಪಡೆಯುವ ಪ್ರಕ್ರಿಯೆಯನ್ನು ಈಗ ಜನಸ್ನೇಹಿಯಾಗಿ ರೂಪಿಸಲಾಗಿದ್ದು, ಗ್ರಾಪಂ ಸಿಬ್ಬಂದಿಯೇ ಫಲಾನುಭವಿಗಳ ಮನೆಗಳಿಗೆ ತೆರಳಿ ಈ ಸ್ವತ್ತು ನೀಡುವ ಅಭಿಯಾನಕ್ಕೆ ಚಾಲನೆ ನೀಡಿದ್ದು ಎಂಎ.ಸ್. ದಿವಾಕರ್ .

ರಾಜ್ಯದಲ್ಲಿ ಆನ್‌ಲೈನ್ ನಲ್ಲಿ ಈ ಸ್ವತ್ತು ಪಡೆಯುವುದು ರಾಜ್ಯದಾದ್ಯಂತ ಒಂದೇ ಮಾದರಿ ಯಲ್ಲಿದೆ. ಆದರೆ, ಗ್ರಾಮಾಂತರ ಪ್ರದೇಶದಲ್ಲಿ ಜನಸಾಮಾನ್ಯರು ಅರ್ಜಿ ಸಲ್ಲಿಸುವುದು, ಪೂರಕ ದಾಖಲೆ ಒದಗಿಸುವುದು, ಸಮಯಕ್ಕೆ ಸರಿಯಾಗಿ ಪಿಡಿಒಗಳು, ಕಾರ್ಯದರ್ಶಿಗಳು ಫಲಾನುಭವಿಗಳಿಗೆ ಸಿಗದಿರುವುದು ನಂತರ ಹಣಕ್ಕೆ ಬೇಡಿಕೆ ಇಡುವ ಪ್ರಕರಣಗಳು ಸಾಕಷ್ಟು ಇದ್ದವು ಇದನ್ನ ಗಮನ ಹರಿಸಿದ ಇವರು ಗ್ರಾಮಾಂತರ ಪ್ರದೇಶದಲ್ಲಿ ಆಸ್ತಿ ದೃಢೀಕರಿಸುವ ಈ ಸ್ವತ್ತನ್ನು ಸ್ವಯಂ ಪ್ರೇರಿತವಾಗಿ ಪಂಚಾಯಿತಿಗಳಿಂದಲೇ ಫಲಾನುಭವಿಗಳಿಗೆ ಒದಗಿಸಬೇಕು ಎಂದು ಯೋಚಿಸಿ, ಈ ಸ್ವತ್ತನ್ನು ಮನೆ ಬಾಗಿಲಿಗೆ ತಲುಪಿಸುವ ಅಭಿಯಾನಕ್ಕೆ ಚಾಲನೆ ನೀಡಿದರು. ತಾವೇ ಹಲವು ಪಂಚಾಯಿತಿಗಳ ಫಲಾನುಭವಿಗಳ ಮನೆಗೆ ತೆರಳಿ ಈ ಸ್ವತ್ತು ದಾಖಲೆ ನೀಡುವುದರ ಮೂಲಕ ಜಾಗೃತಿ ಮೂಡಿಸುವಲ್ಲಿ ಮಹತ್ವದ ಹೆಜ್ಜೆ ಇರಿಸಿದ್ದಾರೆ.

### ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಸ್ಟೆಲ್ ಸುಧಾರಣೆ

ಸರ್ಕಾರಿ ಹಾಸ್ಟೆಲ್ ಎಂದರೆ ವಾರ್ಡನ್ ಗಳ ಸಮಯ ಪ್ರಜ್ಞೆ ಇಲ್ಲದೇ ಹಾಸ್ಟೆಲ್ ಗಳಿಗೆ ಬಂದು ಹೋಗಬಹುದು ಎಂಬ ಧೋರಣೆಯನ್ನು ಅನುಸರಿಸುತ್ತಿದ್ದರು. ಊಟ ಹಾಕಿಸಲು ಅಡುಗೆಯವರು ಇದ್ದಾರೆ ಎಂಬ ಮನಸ್ಥಿತಿಯಲ್ಲಿದ್ದ ಕೆಲವು ವಾರ್ಡನ್ ಗಳಿಗೆ ಬಿಸಿ ಮುಟ್ಟಿಸುವ ಕೆಲಸ ಮಾಡಿದರು. ಹಾಸ್ಟೆಲ್ ಗೆ ದಿಢೀರ್ ಭೇಟಿ ನೀಡಿ ಅಡುಗೆ ಪದಾರ್ಥಗಳು, ತರಕಾರಿ, ಮೊಟ್ಟೆ ಸತಬರಾಜು ಮಾಹಿತಿ ಪಡೆಯುತ್ತಿದ್ದರು. ಕೆಲ ಅಡುಗೆ ಸಹಾಯಕರು ಹಾಸ್ಟೆಲ್ ಹಾಜರಿಯಲ್ಲಿ ಹಾಜರು ಹಾಸ್ಟೆಲ್ ಗೆ ಚಕ್ಕರ್ ಎಂಬ ತತ್ವ ಅನುಸರಿಸುತ್ತಿದ್ದರು ಇಂತಹ ವರ್ತನೆಗಳಿಗೆ ಹಲವು ವಾರ್ಡನ್ ಗಳು, ಅಡುಗೆ ಸಹಾಯಲರು, ಸಿಬ್ಬಂದಿಗಳಿಗೆ ಸಸ್ಪೆಂಡ್ ಬಿಸಿ ಮುಟ್ಟಿಸುವ ಮೂಲಕ ಹಾಸ್ಟೆಲ್ ನಲ್ಲಿ ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸುವಂತೆ ಸೂಚನೆ ನೀಡಿದ್ದರು. ಅನೇಕ ತಿಂಗಳಿನಿಂದ ಸರಿಯಾದ ರೀತಿಯಲ್ಲಿ ಆಹಾರ ಸರಬರಾಜು ಆಗದೇ ಇರುವ ಸರ್ಕಾರಿ ಹಾಸ್ಟೆಲ್ ಗಳಿಗೆ ಶುಭ್ರವಾದ ತರಕಾರಿ, ಗುಣಮಟ್ಟದ ಆಹಾರ ಸರಬರಾಜು, ಅಧಿಕಾರಿಗಳು, ಸಿಬ್ಬಂದಿಗಳು ಉತ್ತಮವಾಗಿ ಕಾರ್ಯ ನಿರ್ವಹಿಸಲು ಸಿಇಓ ದಿವಾಕರ್ ಅವರ ಪಾತ್ರ ದೊಡ್ಡದಿದೆ.




ಚಿತ್ರದುರ್ಗ ಜಿಲ್ಲೆಯ ಜಿ.ಪಂ.ಸಿಇಓ ಎಂ.ಎಸ್.ದಿವಾಕರ್ ಅವರು ವಿಜಯನಗರ ಜಿಲ್ಲಾಧಿಕಾರಿಯಾಗಿ ವರ್ಗಾವಣೆಯಾಗಿದ್ದು ಇಂದು ಚಿತ್ರದುರ್ಗದ ಪತ್ರಕರ್ತರ ಜೊತೆ ಗ್ರೂಪ್ ಫೋಟೋ

### ಶಿಕ್ಷಣ ಕ್ಷೇತ್ರ ಸುಧಾರಣೆಗೆ ಒತ್ತು:

ಕೆಎಂಆರ್ಸಿ ಮೂಲಕ 1440 ಶಾಲೆಗಳ ಅಭಿವೃದ್ಧಿ ಮಾಡಲು ಎಲ್ಲಾ ಸಿದ್ದತೆ ನಡೆಸಿದ್ದರು.ಆದರೆ ಕೆಲವು ಕಟ್ಟಡಗಳು ಉತ್ತಮವಾಗಿದ್ದು ಸ್ವಲ್ಪ ನವೀಕರಣ ಮಾಡಿದರೆ 25 ರಿಂದ 30 ವರ್ಷಗಳ ಬಾಳಿಕೆ ಬರುವಂತಹ 990 ಕ್ಕೂ ಹೆಚ್ಚು ಹಳೆ ಶಾಲಾ ಕಟ್ಟಡಗಳ ನವೀಕರಣಕ್ಕೆ ಒತ್ತು ನೀಡಿದರು. 450 ಹೊಸ ಕಟ್ಟಡಗಳ ನಿರ್ಮಾಣಕ್ಕೆ ಸರ್ಕಾರದ ಹಂತದಲ್ಲಿ ಜಾರಿಗೊಳಿಸಲು ಕ್ರಮ ವಹಿಸಿದರು. ಚಳ್ಳಕೆರೆ ಮತ್ತು ಹಿರಿಯೂರು ತಾಲೂಕು ಒರತುಪಡಿಸಿ ಬಹುತೇಕ ಶಾಲಾ ಕಟ್ಟಡಗಳ ಸುಧಾರಣೆ ಆಗುವುದರಲ್ಲಿ ಇವರ ಕಾರ್ಯ ಎಂದು ಮರೆಯುವಂತಿಲ್ಲ. ವಿಶೇಷವಾಗಿ ಶಿಕ್ಷಣಕ್ಕೆ ಕ್ಷೇತ್ರದ ಮೇಲೆ ವಿಶೇಷ ಪ್ರೀತಿ ಇರುವ ಎಂ.ಎಸ್.ದಿವಾಕರ್ ಇರುವ ಸಮಯದಲ್ಲಿ ಎಸ್ ಎಸ್ ಎಲ್ ಸಿ ಫಲಿತಾಂಶದಲ್ಲಿ ರಾಜ್ಯಕ್ಕೆ ಚಿತ್ರದುರ್ಗ ಜಿಲ್ಲೆ ಮೊದಲನೇ ಸ್ಥಾನ ಸಹ ಪಡೆದಿರುವುದು ಮತ್ತೊಂದು ಹೆಮ್ಮೆಯ ವಿಚಾರವಾಗಿದೆ.

### ಉದ್ಯೋಗ ಖಾತ್ರಿಯೋಜನೆಯಜನೆಯಲ್ಲಿ ಐತಿಹಾಸಿಕ ಪುಷ್ಕಣೆಗೆ ಸ್ವಚ್ಚತೆ:

ಪುರಾತನ ಕಾಲದಿಂದಲೂ ಜಿಲ್ಲೆಯಲ್ಲಿ ನೂರಾರು ಪುಷ್ಕರಣೆಗಳು ಇವೆ. ಆದರೆ ಇದನ್ನು ಸ್ವಚ್ಚಗೊಳಿಸುವ ಕಾರ್ಯಕ್ಕೆ ಯೋಚಿಸಿದ ಸಿಇಓ ದಿವಾಕರ್ ಅವರು ಸುಮಾರು 137 ಪುಷ್ಕರಣಿ ಸ್ವಚ್ಚತೆಗೊಳಿಸಿದರು.

### ಕುಡಿಯುವ ನೀರಿನ ಟ್ಯಾಂಕ್‌ಗಳ ಸ್ವಚ್ಚತೆ

ಎಲ್ಲಾ ಅಧಿಕಾರಿಗಳು ನಗರ ಸ್ವಚ್ಚತೆ, ಪುಷ್ಕರಣೆ ಸ್ವಚ್ಚತೆ, ಗ್ರಾಮ ಸ್ವಚ್ಚತೆ ಕಡೆ ಗಮನ ಹರಿಸುವುದು ಸಾಮಾನ್ಯ ಆದರೆ ಇವೆಲ್ಲವೂ ಜೊತೆಗೆ ಕುಡಿಯುವ ನೀರಿನ ಟ್ಯಾಂಕ್ ಗಳು ಸ್ವಚ್ಚತೆ ಕಡ್ಡಾಯವಾಗಿ ನೀರು ಸರಬರಾಜು ಮಾಡುವ ನೀರುಗಂಟಿಗಳು ಮಾಡಬೇಕು. ಆರೋಗ್ಯದ ಮೇಲೆ ಕುಡಿಯುವ ನೀರು ಹೆಚ್ಚು ಪರಿಣಾಮ ಬೀರುತ್ತದೆ ಎಂಬುದನ್ನು ಅರಿತು ಟ್ಯಾಂಕ್ ಸ್ವಚ್ಚತೆಯ ಅಭಿಯಾನ ನಡೆಸಿದರು ಮತ್ತು ಆ□□□ ಪ್ಲಾಂಟ್ ಗಳ ತೊಟ್ಟಿಯನ್ನು ಸಹ ಕಡ್ಡಾಯವಾಗಿ ತೊಳೆಯಬೇಕಿ. ತೊಟ್ಟಿಗಳನ್ನು ತೊಳೆಯುವುದಕ್ಕೆ ನೀರುಗಂಟಿಗಳಿಗೆ ಸಹಾಯಧನ ನೀಡಿ ಎಂದು ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

### ಗ್ರಾಮ ಪಂಚಾಯತಿ ಪಿಡಿಓಗಳಿಗೆ ಕಡ್ಡಾಯ ಹಾಜರಿ

ಗ್ರಾಮೀಣ ಭಾಗದಲ್ಲಿ ಪಿಡಿಓಗಳು ನಗರ ಪ್ರದೇಶದಲ್ಲಿ ಪಂಚತಂತ್ರ 2 ನ್ನು ನೋಡಿ ಸಂಬಳ ನೀಡುವ ಪದ್ದತಿಯನ್ನು ಅನುಸರಿಸುವ ಹೊಸ ಪದ್ದತಿಗೆ ಅನುಷ್ಟಾನ ಮೂಲಕ ಜಿಲ್ಲೆಯ ಪಿಡಿಓ ಗಳು ಎಲ್ಲಾ ಕಾರ್ಯ ನಿರ್ವಹಣೆ ಪಕ್ಕ ಮಾಹಿತಿ ದೊರಕುವಂತೆ ಮಾಡಿದರು. ಎಲ್ಲಾ ಪಿಡಿಓ ಗಳು ತಾಲೂಕು ಜಿಲ್ಲಾ ಕೇಂದ್ರ ಬಿಟ್ಟು ಗ್ರಾಮೀಣ ಪ್ರದೇಶಕ್ಕೆ ಹೆಜ್ಜೆ ಹಾಕಿದರು. ಇದರಿಂದ ಗ್ರಾಮ ಪಂಚಾಯತಿ ಸುಧಾರಣೆ, ಆಫೀಸ್ ನಲ್ಲಿ ಇರುವ ಸಮಯ, ಫೀಲ್ಡ್ ನಲ್ಲಿ ಕಳೆದ ಸಮಯ ಎಲ್ಲಾ ಪಡೆದು ಸಂಬಳ ಮಾಡುವ ನೀಡುವುದನ್ನು ಜಾರಿಗೊಳಿಸಿದರು.

### ಉದ್ಯೋಗ ಖಾತ್ರಿ ಕಾಮಗಾರಿಗಳಿಗೆ ಟೆಂಡರ್ ಪದ್ದತಿ

ಬಡವರ ಪಾಲಿನ ಮಹತ್ವಾಕಾಂಕ್ಷೆ ಯೋಜನೆಯಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಕಾಮಗಾರಿಗಳಿಗೆ ಟೆಂಡರ್ ಪದ್ದತಿ ಅನುಸರಿಬೇಕು ಎಂಬ ಹೊಸ ಕಾರ್ಯಕ್ರಮ ಜಾರಿಗೊಳಿಸಿದರು.

### ಉದ್ಯೋಗ ಖಾತ್ರಿ ಇಂಜಿನಿಯರ್ ಗಳಿಗೆ ಹೊಸ ಆ್ಯಪ್

ಉದ್ಯೋಗ ಖಾತ್ರಿ ಯೋಜನೆಯ ಕಾಮಗಾರಿಗಳಿಗೆ ವಿಕ್ಷಣೆಗೆ ತೆರಳುವ ಇಂಜಿನಿಯರ್ ಗಳಿಗೆ ಹೊಸದಾಗಿ ಆ್ಯಪ್ ಡೌಲಪ್ ಮಾಡಲಾಗಿದ್ದು ಸ್ವಲ್ಪ ದಿನದಲ್ಲಿ ಜಾರಿಗೊಳಿಸಲು ಸಿದ್ದತೆ ನಡೆಸಿದ್ದರು. ಆದರೆ ವರ್ಗಾವಣೆ ಆದರು ಸಹ ಈ ಯೋಜನೆ ಜಾರಿಗೊಳಿಸಲು ಎಲ್ಲಾ ಪ್ರಕ್ರಿಯೆ ಪೂರ್ಣಗೊಳಿಸಿದ್ದು ಎಲ್ಲಾ ಇಂಜಿನಿಯರ್ ಗಳು ಫೀಲ್ಡ್ ಹೋಗದೇ ಎಲ್ಲಿ ಬೇಕೋ ಅಲ್ಲಿ ಕುಳಿತು ಬಿಲ್ ಬರೆಯುವುದಕ್ಕೆ ಬ್ರೇಕ್ ಹಾಕಲು ಹೊಸ ಕಾರ್ಯಕ್ರಮ ಮುಂದಿನ ದಿನದಲ್ಲಿ ಆಗಲಿದೆ. ಈ ಎಲ್ಲಾ ಕಾರ್ಯಕ್ರಮಗಳ ಮೂಲಕ ರಾಜ್ಯದ ಗಮನ ಸೆಳೆದಿದ್ದಂತಹ ಎಂ.ಎಸ್.ದಿವಾಕರ್ ಅವರು ವಿಜಯನಗರ ಜಿಲ್ಲಾಧಿಕಾರಿಯಾಗಿ ವರ್ಗಾವಣೆಗೊಂಡಿದ್ದಾರೆ. ಇವರು ಮಾಡಿದ ವಿನೂತನ ಕಾರ್ಯಕ್ರಮಗಳನ್ನು ಮುಂದುವರೆಸಿಕೊಂಡು ಇಂತಹ ವಿಶೇಷ ಕಾಳಜಿ ಇರುವಂತಹ ಅಧಿಕಾರಿಗಳು ಮುಂದಿನದ ದಿನದಲ್ಲಿ ಚಿತ್ರದುರ್ಗ ಜಿಲ್ಲೆಯ ಜಿಲ್ಲಾ ಪಂಚಾಯತಿಗೆ ಆಗಮಿಸಲಿ ಎಂಬ ಬಯಕೆ ಜಿಲ್ಲೆಯ ಜನರಲ್ಲಿದೆ.








## ಫಾಸ್ಟ್ ನ್ಯೂಸ್

### ಕುರಿ,ಮೇಕೆ ಘಟಕಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದಿಂದ, ಜಿಲ್ಲಾ ನಿಗಮದ ವತಿಯಿಂದ ಪ್ರಸಕ್ತ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ (6+1) ಕುರಿ,ಮೇಕೆ ಘಟಕಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ನಿಗಮದಲ್ಲಿ ನೊಂದಾಯಿತರಾದ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ 18-60 ವರ್ಷ ವಯೋಮಿತಿಯ ಮಹಿಳಾ ಸದಸ್ಯರು ಅಥವಾ ಮಹಿಳಾ ಸದಸ್ಯರು ಇಲ್ಲವಾದಲ್ಲಿ ಪುರುಷ ಸದಸ್ಯರು ಅರ್ಜಿ ಸಲ್ಲಿಸಬಹುದು. ಈ ಹಿಂದೆ ಸಹಾಯಧನ ಪಡೆದಿರುವ ಫಲಾನುಭವಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಆಸಕ್ತರು ನಿಗದಿತ ಅರ್ಜಿಗಳನ್ನು ಆಯಾ ತಾಲೂಕು ಮಟ್ಟದ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕರು/ಮುಖ್ಯ ಪಶುವೈದ್ಯಾಧಿಕಾರಿ(ಆಡಳಿತ) ಗಳಿಂದ ಪಡೆದು ಭರ್ತಿ ಮಾಡಲಾದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಇಲಾಖೆಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜುಲೈ 25 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಸೇವಾ ಇಲಾಖೆ ತಾಲ್ಲೂಕು ಮುಖ್ಯ ಪಶುವೈದ್ಯಾಧಿಕಾರಿಗಳು (ಆಡಳಿತ) ಪಶು ಆಸ್ಪತ್ರೆ, ಸಂಪರ್ಕಿಸಲು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕರಾದ ಸಂತೋಷ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜು. 20 ರಿಂದ ಸೆ. 6 ವರೆಗೆ ಜಲಸಿರಿ ಯೋಜನೆ ಕಾಮಗಾರಿ

» ದಾವಣಗೆರೆ

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜುಲೈ 20 ರಿಂದ ಸೆಪ್ಟೆಂಬರ್ 6 ವರೆಗೆ ನಗರದ ಅರಳಿಮರ ಸರ್ಕ□□ನಿಂದ ಅಶೋಕ ಚಿತ್ರಮಂದಿರ (ಕೆ. ಆರ್. ರಸ್ತೆ) ವರೆಗೆ ಕುಡಿಯುವ ನೀರಿನ ಪೈಪುಗಳನ್ನು ಅಳವಡಿಸುವ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಕಾಮಗಾರಿ ನಿರ್ವಹಿಸಲು ಸಹಕರಿಸುವಂತೆ ಸಾರ್ವಜನಿಕರಲ್ಲಿ ಮಹಾನಗರ ಪಾಲಿಕೆ ಆಯುಕ್ತರು ಮನವಿ ಮಾಡಿದ್ದಾರೆ.

ಏಷಿಯನ್ ಅಭಿವೃದ್ಧಿ ಬ್ಯಾಂ□□ನ ನೆರವು ಹಾಗೂ ಅಮೃತ್ ಯೋಜನೆಯಡಿ ಮಹಾನಗರ ಪಾಲಿಕೆ ಹಾಗೂ ಕೆ.ಯು.ಐ.ಡಿ.ಎಫ್.ಸಿ., ಇಲಾಖೆಯ ವತಿಯಿಂದ ಕೈಗೊಂಡಿರುವ 24ಥ7 ಶುದ್ಧ ಕುಡಿಯುವನೀರುಸರಬರಾಜುಯೋಜನೆ(ಜಲಸಿರಿ ಯೋಜನೆ) ಯನ್ನು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನುಷಾ□□ನಗೊಳಿಸಲಾಗಿದೆ. ನಿಗಧಿತ ಮಾರ್ಗಗಳ ರಸ್ತೆಯ ಎರಡೂ ಬದಿಗಳಲ್ಲಿ ನೆಲ ಅಗೆತ ಹಾಗೂ ಯೋಜನೆಯ ಅವಶ್ಯಕತೆಗನುಗುಣವಾಗಿ ರಸ್ತೆಯನ್ನು ಕತ್ತರಿಸಿ ಪೈಪುಗಳನ್ನು ಅಳವಡಿಸಲಾಗುವುದು. ಜಲಸಿರಿ ಕಾಮಗಾರಿಯನ್ನು ಪ್ರತಿದಿನ ಬೆಳಿಗ್ಗೆ 6.30 ರಿಂದ ರಾತ್ರಿ 9.30 ರವರೆಗೆ ಕೈಗೊಳ್ಳಲಾಗುತ್ತಿದ್ದು, ಕಾಮಗಾರಿ ಅವಧಿಯಲ್ಲಿ ಸಾರ್ವಜನಿಕರ ಮನೆಗಳು, ಅಂಗಡಿ ಮುಂಗಟ್ಟುಗಳು, ಸರ್ಕಾರಿ ಕಛೇರಿಗಳು, ನಗರದ ಮಾರುಕಟ್ಟೆ ಪ್ರದೇಶಗಳನ್ನು ಸಂಪರ್ಕಿಸುವ ರಸ್ತೆಗಳು, ಖಾಸಗಿ ಬಸ್ ನಿಲ್ದಾಣಗಳು ಹಾಗೂ ಇನ್ನಿತರ ಪ್ರದೇಶಗಳಲ್ಲಿ ಪೈಪುಗಳನ್ನು ಅಳವಡಿಸಲು ನೆಲ ಅಗೆತ ಮಾಡಿರುವ ಸ್ಥಳಗಳಲ್ಲಿ ಬ್ಯಾರಿಕೇಡ್, ಸಂಚಾರ ಸೂಚನಾ ಫಲಕಗಳು ಹಾಗೂ ಸೂಕ್ತ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುವುದು ಆದ್ದರಿಂದ ವಿವಿಧ ಅಂಗಡಿ ಮುಂಗಟ್ಟು ಮಾಲೀಕರು ಮತ್ತು ಸಾರ್ವಜನಿಕರು ತಮ್ಮ ವಾಹನಗಳನ್ನು ಬೇರೆ ಸ್ಥಳದಲ್ಲಿ ನಿಲ್ಲಿಸಬೇಕು ಮತ್ತು ಕಾಮಗಾರಿ ನಡೆಸುವ ಮಾರ್ಗಗಳಲ್ಲಿ ಸಂಚರಿಸುವ ಸಾರ್ವಜನಿಕರು, ಪರ್ಯಾಯ ಮಾರ್ಗದಲ್ಲಿ ಸಂಚರಿಸಲು ಅವರು ತಿಳಿಸಿದ್ದಾರೆ.

### ಆನ್‌ಲೈನ್ ತರಬೇತಿ

» ದಾವಣಗೆರೆ

ಕೃಷಿ ಇಲಾಖೆ ಮತ್ತು ಕೃಷಿ ವಿಶ್ವವಿದ್ಯಾನಿಲಯಗಳಿಂದ ರೈತರಿಗೆ ತೊಗರಿ ಸೊರಗು ರೋಗದ ಸಮಗ್ರ ನಿರ್ವಹಣೆಗೆ ರಾಜ್ಯ ಮಟ್ಟದ ಆ□□ಲೈನ್ ತರಬೇತಿ ಹಮ್ಮಿಕೊಳ್ಳಲಾಗಿದೆ. ತರಬೇತಿಯು ಜುಲೈ.19 ರಂದು 10.30 ರಿಂದ 12.30ರ ವರೆಗೆ ನಡೆಯಲಿದೆ. ಭಾಗವಹಿಸುವವರು.ಲಿಂಕ್ https://zoom.us/j/92953255829?pwd=TUVoVGZyTWJZMTdUSG5DNU1ScTQ1UT09 ಮತ್ತು ಪಾಸ್ ಕೋಡ್:123123ನ್ನು ಬಳಸಬಹುದು. ಹೆಚ್ಚಿನ ಮಾಹಿತಿಗಾಗಿ ಕೃಷಿ ಇಲಾಖೆಯ ಆತ್ಮ ಸಿಬ್ಬಂದಿ ಅಥವಾ ದೂ:9481425522, 9591212871 , 99646 89340ಗೆ ಸಂಪರ್ಕಿಸಿ.

### ಅರ್ಜಿ ಆಹ್ವಾನ

» ದಾವಣಗೆರೆ

ಪರಿಶಿಷ್ಟ ಜಾತಿಯ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ವಿವಿಧ ಜೀವನೋಪಾಯ ಚಟುವಟಿಕೆಗಳನ್ನು ಕೈಗೊಳ್ಳಲು ಸಮಾಜ ಕಲ್ಯಾಣ ಇಲಾಖೆಯ ಕೇಂದ್ರೀಯ ವಿಶೇಷ ಸಹಾಯಧನ ಕಾರ್ಯಕ್ರಮದಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ದೀನ ದಯಾಳ್ ಅಂತ್ಯೋದಯ ಯೋಜನೆ-ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದ ಸಾಂಸ್ಥಿಕ ಅಭಿವೃದ್ಧಿ ಉಪಘಟಕದಡಿ ಸಂಘದ ಪ್ರತಿ ಸದಸ್ಯರಿಗೆ ರೂ 50,000 ಸಹಾಯಧನ ನಿಗದಿಪಡಿಸಲಾಗಿದೆ. ಅರ್ಜಿಯನ್ನು ಜುಲೈ 24ರ ಒಳಗಾಗಿ ಹರಿಹರ ನಗರಸಭೆಯ ಪೌರಾಯುಕ್ತರ ಕಚೇರಿಗೆ ಸಲ್ಲಿಸಬೇಕೆಂದು ಎಂದು ಹರಿಹರ ನಗರಸಭೆಯ ಪೌರಾಯುಕ್ತರು ಬಸವರಾಜಪ್ಪ

# ಮರ್ಚೆಂಟ್ಸ್ ಬ್ಯಾಂಕ್‌ಗೆ 4.41 ಕೋಟಿ ಲಾಭ

» ಚಿತ್ರದುರ್ಗ

ನಗರದ ಪ್ರತಿಷ್ಠಿತ ಬ್ಯಾಂಕು ದಿ ಮರ್ಚೆಂಟ್ಸ್ ಸೌಹಾರ್ದ ಸಹಕಾರ ಬ್ಯಾಂಕು2022-23ನೇ ಸಾಲಿನಲ್ಲಿಆದಾಯತೆರಿಗೆ ಪಾವತಿ ಮುನ್ನ 5.41 ಕೋಟಿ ರೂ.ಗಳ ವರಮಾನ ಗಳಿಸಿದ್ದು, ಆದಾಯತೆರಿಗೆ ಮತ್ತು ಅವಕಾಶಗಳಿಗೆ ಪಾವತಿಸಿದ ನಂತರ 4.41 ಕೋಟಿ ರೂಪಾಯಿಗಳ ನಿವ್ವಳ ವರಮಾನ ಗಳಿಸಿದ್ದು, 21-22ನೇ ಸಾಲಿಗಿಂತ 1.51 ಕೋಟಿರೂ. ಹೆಚ್ಚುವರಿ ವರಮಾನ ಗಳಿಸಿದೆ. ಇದಕ್ಕೆ ಬ್ಯಾಂಕಿನ ಸದಸ್ಯರು ಹಾಗೂ ಗ್ರಾಹಕರ ಸಹಕಾರಕ್ಕೆ ಆಡಳಿತ ಮಂಡಳಿ ಅಭಿನಂದಿಸುತ್ತದೆಎಂದು ಬ್ಯಾಂಕಿನಅಧ್ಯಕ್ಷರಾದ ಸಹಕಾರರತ್ನಎಸ್. ಆರ್. ಲಕ್ಷ್ಮೀಕಾಂತರೆಡ್ಡಿಅವರು ತಿಳಿಸಿದರು.

ನಗರದ ಚಳ್ಳಕೆರೆ ರಸ್ತೆಯಲ್ಲಿರುವಎಸ್.ಜಿ. ಕನ್ವೆನ್ಷನ್ ಹಾಲ್‌ನಲ್ಲಿಜು. 16 ರಂದು ನಡೆದ ಬ್ಯಾಂಕಿನ 72ನೇ ವಾರ್ಷಿಕ ಸರ್ವ ಸದಸ್ಯರ ಮಹಾಸಭೆ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

31-03-2023ರ ವರೆಗೆ ಬ್ಯಾಂಕಿನಲ್ಲಿ 5,790ಸದಸ್ಯರಿದ್ದಾರೆ.ಬ್ಯಾಂಕಿನಅನುತ್ಪಾದಕ ಆಸ್ತಿಗಳು (ಎನ್.ಪಿ.ಎ.) ನಿವ್ವಳ ಶೂನ್ಯ ಪ್ರಮಾಣದಲ್ಲಿರುವುದು ಬ್ಯಾಂಕಿನ ಸಧೃಡತೆಯನ್ನುಪ್ರತಿಬಿಂಬಿಸುತ್ತದೆ.ಬ್ಯಾಂಕಿನ ಸ್ವಂತ ಬಂಡವಾಳ ಈ ಸಾಲಿನ ಲಾಭದ ವಿಲೇವಾರಿ ನಂತರ 39.83 ಕೋಟಿಗಳಷ್ಟಿದೆ.



2023ರ ಮಾರ್ಚ್‌ಅಂತ್ಯಕ್ಕೆ 164.75 ಕೋಟಿರೂ. ಒಟ್ಟುಠೇವಣಿಇದ್ದು, ಪ್ರತೀ ವರ್ಷದಂತೆ ಈ ವರ್ಷವೂ ಬ್ಯಾಂಕಿನಲ್ಲಿ ಠೇವಣಿಗಳ ಪ್ರಮಾಣದಲ್ಲಿಏರಿಕೆಇದ್ದು, ಕಳೆದ ಸಾಲಿಗಿಂತ 12.42 ಕೋಟಿರೂ. ಹೆಚ್ಚುವರಿಠೇವಣಿ ಸಂಗ್ರಹವಾಗಿದೆ. ಬ್ಯಾಂಕಿನ ಮೇಲಿರುವ ವಿಶ್ವಾಸ ಮತ್ತು ನಂಬಿಕೆಗೆ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ಪರವಾಗಿಠೇವಣಿದಾರರೆಲ್ಲರಿಗೂ ಲಕ್ಷ್ಮೀಕಾಂತರೆಡ್ಡಿ ಧನ್ಯವಾದಗಳನ್ನು ಅರ್ಪಿಸಿದರು.ಸತತವಾಗಿ 12 ವರ್ಷಗಳಿಂದ ಮತ್ತು ಹಿಂದಿನ ಆರ್ಥಿಕ ವರ್ಷಗಳಲ್ಲಿ 07 ವರ್ಷಗಳು ಒಟ್ಟು 19 ವರ್ಷಗಳ ಕಾಲ ಬ್ಯಾಂಕಿನ ಶೇರುದಾರರಿಗೆ ಶೇ. 25ರ ದರದಲ್ಲಿಲಾಭಾಂಶವನ್ನುಪಾವತಿಸಲಾಗಿದೆ. ಈ ಬಾರಿಯೂ ಶೇ. 25 ಲಾಭಾಂಶ ವಿತರಿಸುತ್ತಿರುವುದಾಗಿ ಹೇಳಿದಾಗ ಸಭೆಯಲ್ಲಿದ್ದ ಸದಸ್ಯರುಕರತಾಡನದ ಮೂಲಕ ಹರ್ಷ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ 2023-24ನೇ ಸಾಲಿನ ಆಯವ್ಯಯವನ್ನು ಸದಸ್ಯರಅನುಮೋದನೆಗಾಗಿಮಂಡಿಸಿದಾಗ ಉಪಸ್ಥಿತರಿದ್ದ ಸದಸ್ಯರು ಚಪ್ಪಾಳೆ ಮೂಲಕ ಅನುಮೋದನೆ ನೀಡಿದರು.

ರೂ. ಐದು ಲಕ್ಷದವರೆಗಿನ ಬ್ಯಾಂಕಿನ ಸದಸ್ಯರ ಮತ್ತುಗ್ರಾಹಕರ ಡಿಪಾಜಿಟ್‌ಗಳು ಡಿಐಸಿಜಿಸಿ ವಿಮೆಗೆ ಒಳಪಟ್ಟಿರುವುದು ಸೇರಿದಂತೆ ಬ್ಯಾಂಕಿನ ಸದಸ್ಯರುಗಳಿಗೆ ಹಲವಾರು ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಸೌಲಭ್ಯಗಳನ್ನು ಮುಂದುವರೆಸಿಕೊಂಡು ಹೋಗಲಾಗುವುದುಎಂದು ತಿಳಿಸಿದ ಎಸ್. ಆರ್. ಲಕ್ಷ್ಮೀಕಾಂತರೆಡ್ಡಿಅವರು ಬ್ಯಾಂಕಿನ ಸರ್ವತೋಮುಖಅಭಿವೃದ್ಧಿಗೆಎಲ್ಲಾ ಸದಸ್ಯರ ಸಹಕಾರವನ್ನುಕೋರಿದಾಗ ಸದಸ್ಯರು ಸರ್ವಾನುಮತದಿಂದಒಪ್ಪಿಗೆ ಸೂಚಿಸಿದರು.ಇದೇ ಸಂದರ್ಭದಲ್ಲಿ ಬ್ಯಾಂಕಿನ ಹಿರಿಯ ಸದಸ್ಯರುಗಳಿಗೆ, ಎಸ್. ಎಸ್.ಎಲ್.ಸಿ. ಹಾಗೂ ಪಿ.ಯು.ಸಿ.ಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿಉತ್ತೀರ್ಣರಾಗಿರುವ ಸದಸ್ಯರ ಪ್ರತಿಭಾನ್ವಿತ ಮಕ್ಕಳಿಗೆ ನಗದು, ಪ್ರಶಸ್ತಿ ಪತ್ರ ಸೇರಿದಂತೆ ಪ್ರತಿಭಾ ಪುರಸ್ಕಾರವನ್ನು ನೆರವೇರಿಸಲಾಯಿತು.

ಬ್ಯಾಂಕಿನ ಸದಸ್ಯರು ಹಾಗೂ ತುಮಕೂರುಜಿಲ್ಲೆ ಪಾವಗಡತಾಲೂಕಿನ ಶಾಸಕರಾದ ವಿ. ವೆಂಕಟೇಶ್‌ಅವರನ್ನುಇದೇ ಸಂದರ್ಭದಲ್ಲಿ ಬ್ಯಾಂಕಿನ ವತಿಯಿಂದ ಸನ್ಮಾನಿಸಲಾಯಿತು.

ಬ್ಯಾಂಕಿನ ಸಿಬ್ಬಂದಿ ಸರಸ್ವತಿ, ಕೃತಿಕಾ ಪ್ರಾರ್ಥಿಸಿದರು. ಹಿಂದಿನ ಸಾಲಿನ ಮಹಾಸಭೆಯ ನಡವಳಿಕೆಗಳನ್ನು ಬ್ಯಾಂಕಿನ ವ್ಯವಸ್ಥಾಪಕರಾದ ಶ್ರೀಮತಿ ಎಸ್. ಎನ್. ವಾಣಿ ವಾಚಿಸಿದರು. ಬ್ಯಾಂಕಿನ ನಿರ್ದೇಶಕಪಿ.ಎಲ್. ಸುರೇಶ್‌ರಾಜು ಸ್ವಾಗತಿಸಿದರು. ಕಳೆದ ಸರ್ವ ಸದಸ್ಯರ ಸಭೆಯ ದಿನಾಂಕದಿಂದಇಲ್ಲಿಯವರೆಗೂದೆ ೃವಾಧೀನರಾದ ಸದಸ್ಯರಿಗೆಒಂದು ನಿಮಿಷ ಮೌನಾಚರಣೆ ಮಾಡುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.ಮೃತ ಸದಸ್ಯರ ಹೆಸರುಗಳನ್ನು ನಿರ್ದೇಶಕರಘುರಾಮರೆಡ್ಡಿ ವಾಚಿಸಿದರು. ಮತ್ತೊಬ್ಬ ನಿರ್ದೇಶಕ ಶ. ಮಂಜುನಾಥ ವಂದಿಸಿದರು. ಬ್ಯಾಂಕಿನ ಮುಖ್ಯಕಾರ್ಯ ನಿರ್ವಹಣಾಧಿಕಾರಿಕೆ. ಆರ್. ಮಲ್ಲಿಕಾರ್ಜುನ 2022-23ನೇ ಮಹಾಸಭೆಯ ನೋಟೀಸನ್ನು ವಾಚಿಸಿ, ಕಾರ್ಯಕ್ರಮ ನಿರೂಪಿಸಿದರು. ಸರ್ವ ಸದಸ್ಯರ ಸಭೆ ಯಶಸ್ವಿಗೆ ಶ್ರಮಿಸಿದ ಬ್ಯಾಂಕಿನಎಲ್ಲಾ ಸಿಬ್ಬಂದಿ ವರ್ಗ ಹಾಗೂ ಪಿಗ್ಮಿ ಸಂಗ್ರಹಕಾರರು ಸದಸ್ಯರ ಮೆಚ್ಚುಗೆಗೆ ಪಾತ್ರರಾದರು.

# 2 ದಿನ ನಗರದಲ್ಲಿ ನಡೆದ ಭಕ್ತಿಸಿಂಚನ

» ಚಿತ್ರದುರ್ಗ

ಶಿಕ್ಷಣದ ಜೊತೆ ಮಕ್ಕಳಿಗೆ ಆತ್ಮವಿಶ್ವಾಸ ತುಂಬುವ ಕೆಲಸವಾಗಬೇಕಿದೆ ಎಂದು ತುಮಕೂರು ವಿಶ್ವವಿದ್ಯಾನಿಲಯದ ಉಪ ಕುಲಪತಿ ಡಾ.ಎಂ. ವೆಂಕಟೇಶ್ವರುಲು ಹೇಳಿದರು.

ಆರ್ಯವೈಶ್ಯ ಸಂಘ, ಆರ್ಯವೈಶ್ಯ ಸಹ ಸಂಸ್ಥೆಗಳ ಸಹಕಾರದೊಂದಿಗೆ ವಿಶ್ವ ವಾಸವಿ ಜಗದ್ಗುರು ಮಹಾಸಂಸ್ಥಾನಂ, ವಾಸವಿ ಪೀಠಂನ ಸಚ್ಚಿದಾನಂದ ಸರಸ್ವತಿ ಮಹಾಸ್ವಾಮಿಗಳವರ ಪೀಠಾರೋಹಣದ ಎರಡನೆ ವರ್ಷದ ವಾರ್ಷಿಕೋತ್ಸವ ಅಂಗವಾಗಿ ಎರಡು ದಿನಗಳ ಕಾಲ ನಗರದಲ್ಲಿ ನಡೆದ ಭಕ್ತಿ ಸಿಂಚನ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು.ಆರ್ಯವೈಶ್ಯ ಜನಾಂಗ ವಿಶ್ವಕ್ಕೆ ಮಾದರಿಯಾಗಿದ್ದೇವೆ. ಈಗ ಜನಾಂಗಕ್ಕೆ ಗುರು ಸಿಕ್ಕಿದ್ದಾರೆ. ಗುರಿಯೂ ಇದೆ. ಹಾಗಾಗಿ ಗುರುಗಳು ನಮ್ಮ ಯುವ ಪೀಳಿಗೆ. ಮಧ್ಯಮ ವಯಸ್ಕರು ಹಾಗೂ ವಯೋವೃದ್ದರಿಗೆ ಮಾರ್ಗದರ್ಶನ ನೀಡಬೇಕು. ಒಂದು ಕಾಲದಲ್ಲಿ ಆರ್ಯ ಜನಾಂಗವೆಂದರೆ ಕೇವಲ ವ್ಯಾಪರಕ್ಕಷ್ಟೆ ಸೀಮಿತವಾಗಿದ್ದರು. ಈಗ ಉದ್ಯೋಗದವನ್ನು ಪಡೆದಿದ್ದಾರೆ. ಲಕ್ಷ್ಮಿ-ಸರಸ್ವತಿ ಕಟಾಕ್ಷವಿದೆ. ಆರ್ಯ ವೈಶ್ಯ ಸಮಾಜದ ಮಕ್ಕಳು ಬೇರೆಯವರಿಗೆ ಮಾದರಿಯಾಗಬೇಕು ಎಂದು ತಿಳಿಸಿದರು.

ಸರ್ಕಾರದಿಂದ ಸಾಕಷ್ಟು ಸೌಲಭ್ಯಗಳಿವೆ. ಆದರೆ ನಮ್ಮ ಜನಾಂಗದ ಯಾರು ಸೌಲತ್ತುಗಳನ್ನು ಪಡೆದುಕೊಳ್ಳುತ್ತಿಲ್ಲ. ಸರ್ಕಾರದ ಜೊತೆ ಜನ ಸೇವೆ ಮಾಡುತ್ತಿದ್ದಾರೆ. ಆರ್ಯವೈಶ್ಯ ಜನಾಂಗ ಯಾರ ಜೇಬಿಗೂ ಕತ್ತರಿ ಹಾಕುವವರಲ್ಲ. ಪೀಠದಿಂದ ಉಪದೇಶ ಸಿಗಬೇಕಿದೆ. ಹಿಂದಿನಿಂದಲೂ ದಾನ ಮಾಡುವುದು ಆರ್ಯವೈಶ್ಯರ ಹಿರಿಮೆ. ಶಿಕ್ಷಣ, ವ್ಯವಹಾರ, ಕೈಗಾರಿಕೆ ಎಲ್ಲಾ ಕ್ಷೇತ್ರದಲ್ಲಿಯೂ ನಮ್ಮ ಜನಾಂಗ ನಿಸ್ವಾರ್ಥ ಸೇವೆ ಮಾಡುತ್ತಿದೆ. ಶಿಸ್ತು, ಸಮಯ ಪಾಲನೆ ಮುಖ್ಯ. ಆಗ ಮಾತ್ರ ಅಭಿವೃದ್ದಿಯಾಗಲು ಸಾಧ್ಯ ಎಂದು ಕರೆ ನೀಡಿದ ಡಾ.ಎಂ.ವೆಂಕಟೇಶ್ವರುಲು ಹಿಂದೂ ಸನಾತನ ಧರ್ಮ ಪ್ರಚಾರಕ್ಕೆ ನಮ್ಮ ಗುರುಗಳಿಗೆ ಹಾರ್ಡ್‌ವರ್ಡ್ ವಿಶ್ವವಿದ್ಯಾನಿಲಯ ಆಹ್ವಾನಿಸಿರುವುದು ಇಡಿ ಆರ್ಯವೈಶ್ಯ ಜನಾಂಗಕ್ಕೆ ಹಿರಿಮೆ ಎಂದು ಪ್ರಶಂಶಿಸಿದರು.

ಭಕ್ತಿ ಸಿಂಚನ ಕಾರ್ಯಕ್ರಮದ ಸ್ವಾಗತ ಸಮಿತಿ




ಕಾರ್ಯದರ್ಶಿ ಹಾಗೂ ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಟಿ.ಭದ್ರಿನಾಥ್ ಮಾತನಾಡಿ ಜನಸಂಖ್ಯೆಯಲಿಕಡಿಮೆಯಿದ್ದರೂ ಆರ್ಯವೈಶ್ಯ ಜನಾಂಗ ಇಡಿ ವಿಶ್ವದಲ್ಲಿದೆ. ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡು ಕೊಡುಗೈ ದಾನಿಗಳು ಎಂದೆನಿಸಿಕೊಂಡಿದ್ದಾರೆ. ಹತ್ತು ವರ್ಷದಿಂದ ನಮಗೆ ಕುಲಗುರುಗಳು ಇರಲಿಲ್ಲ. ಈಗ ಗುರುಗಳು ಸಿಕ್ಕಿದ್ದಾರೆ. ಸರಿಯಾದ ಮಾರ್ಗದರ್ಶನವಿಲ್ಲದಿದ್ದರೆ ನಮ್ಮ ಜನಾಂಗದ ಯುವ ಪೀಳಿಗೆ ದಿಕ್ಕುತಪ್ಪಬಹುದು. ಅದಕ್ಕಾಗಿ ಗುರುಗಳು ಮಾರ್ಗ ತೋರಬೇಕು ಎಂದು ವಿನಂತಿಸಿದರು.ಸಮಾರೋಪ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಸಚ್ಚಿದಾನಂದ ಸರಸ್ವತಿ ಮಹಾಸ್ವಾಮೀಜಿ ಜಗತ್ತಿನ ಪ್ರಮುಖ ವಿಶ್ವವಿದ್ಯಾನಿಲಯಗಳಲ್ಲಿ ಹಿಂದೂ ಧರ್ಮದ ಭಗವದ್ಗೀತೆ ಅಧ್ಯಯನವಾಗುತ್ತಿದೆ. ದುರಂತವೆಂದರೆ ನಮ್ಮ ದೇಶದ ಯಾವ ವಿಶ್ವವಿದ್ಯಾನಿಲಯಗಳಲ್ಲಿಯೂ ಭಗವದ್ಗೀತೆ ಅಧ್ಯಯನವಾಗುತ್ತಿಲ್ಲದಿರುವುದು ನೋವಿನ ಸಂಗತಿ ಎಂದು ವಿಷಾಧಿಸಿದರು.ಹಿಂದೂ ಧರ್ಮದ ತಳಹದಿ ಭಗವದ್ಗೀತೆ ಉಪನಿಷತ್‌ನ್ನು ಎಲ್ಲರೂ ಕಲಿಯಬೇಕು. ಹಾರ್ಡ್‌ವರ್ಡ್ ವಿಶ್ವವಿದ್ಯಾನಿಲಯದಲ್ಲಿ ಹಿಂದೂ ಸನಾತನ ಧರ್ಮ ಪ್ರಚಾರಕ್ಕೆ ನನಗೆ ಆಹ್ವಾನ ಬಂದಿದೆ. ಎಂಟು ತಿಂಗಳ ಕಾಲ ಅಲ್ಲಿದ್ದು, ಉಪನ್ಯಾಸ ನೀಡುತ್ತೇನೆ. ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳಿಗೆ ಸಾಕಷ್ಟು ಅವಕಾಶವಿದೆ. ಶಿಕ್ಷಣದ ಜೊತೆ ಸಂಸ್ಕೃತಿ, ಆಚರಣೆ, ಧರ್ಮದ ಮಹತ್ವ ತಿಳಿಸಬೇಕಿದೆ. ನಮ್ಮ ದೇವಸ್ಥಾನಗಳನ್ನು ನಾವುಗಳು ಕಾಪಾಡಿಕೊಳ್ಳಬೇಕು.ಚರಿತ್ರೆಯಿರುವ ಆರ್ಯವೈಶ್ಯ ಸಮಾಜವನ್ನು ಗಟ್ಟಿಯಾಗಿಟ್ಟುಕೊಂಡು ಮುಂದೆ ತೆಗೆದುಕೊಂಡು ಹೋಗುವಲ್ಲಿ ಎಲ್ಲರ ಪಾಲ್ಗೊಳ್ಳುವಿಕೆ ಮುಖ್ಯ ಎಂದು ಸೂಚಿಸಿದರು.

ಉದುಬತ್ತಿ ಹಚ್ಚುವುದು, ಪ್ರೋಕ್ಷಣೆ, ಪಂಚಪಾತ್ರೆ ಎನ್ನುವುದು ಈಗಿನ ಯುವ ಪೀಳಿಗೆಗೆ ಗೊತ್ತಿಲ್ಲದಂತಾಗಿದೆ. ಆಚರಣೆಯಿಂದ ಮಾತ್ರ ಸಂಸ್ಕೃತಿ, ಸಂಪ್ರದಾಯ ಉಳಿಯಲು ಸಾಧ್ಯ. ಆರ್ಯವೈಶ್ಯಸಮುದಾಯತಲತಲಾಂತರಗಳಿಂದ ಕೊಡುಗೈ ದಾನಿಗಳು. ದಾನ ಮಾಡುವ ಹೃದಯ ಶ್ರೀಮಂತಿಕೆಯಿಟ್ಟುಕೊಳ್ಳಬೇಕು. ಎಲ್ಲಿಯಾದರೂ ದೇವಸ್ಥಾನ ಕಟ್ಟಿದರೆ ದಿನವೂ ಪೂಜೆ ನೈವೇದ್ಯವಾಗಬೇಕು. ಕಾಟಾಚಾರಕ್ಕೆ ದೇವಸ್ಥಾನ ಕಟ್ಟಿ ಸುಮ್ಮನಾಗಬಾರದು. ಪ್ರತಿಷ್ಠೆ ಬಿಟ್ಟು ಎಲ್ಲರೂ ಕೂಡಿ ಬಾಳುವುದನ್ನು ಕಲಿಯಿರಿ ಎಂದು ಆರ್ಯವೈಶ್ಯ ಜನಾಂಗಕ್ಕೆ ಉಪದೇಶ ಮಾಡಿದರು. ಆಸ್ತಿಗಿಂತ ಹೃದಯ ಶ್ರೀಮಂತಿಕೆ ದೊಡ್ಡ ಮೌಲ್ಯ. ಅದನ್ನು ಜಾಗೃತಿಯಿಂದ ಕಾಪಾಡಿಕೊಳ್ಳಬೇಕು. ಪೀಠಕ್ಕೆ ತನ್ನದೆ ಆದ ಧಾರ್ಮಿಕ ನಿಯಮ, ಸಾಮಾಜಿಕ ದೃಷ್ಠಿಕೋನವಿದೆ. ಯುವ ಜನಾಂಗ ಸಂಸ್ಕಾರ, ಆಧ್ಯಾತ್ಮ, ಯೋಗ ಕಲಿಯಬೇಕು ಎಂದು ಸ್ವಾಮೀಜಿ ಆರ್ಯ ಜನಾಂಗಕ್ಕೆ ಹೇಳಿದರು.ವಾಸವಿ ವಿದ್ಯಾನಿಕೇತನ ಟ್ರಸ್ಟ್ ಮತ್ತು ವಾಸವಿ ಹಾಸ್ಟೆಲ್ ಟ್ರಸ್ಟ್ ಅಧ್ಯಕ್ಷ ಬೆಂಗಳೂರಿನ ಮಾನಂದಿ ಸುರೇಶ್ ಮಾತನಾಡಿ ಸಂಸ್ಕೃತಿ, ಸಂಸ್ಕಾರ, ಗುರುಪೀಠ ಎಂದರೆ ಏನು ಎನ್ನುವುದನ್ನು ಮೊದಲು ವಾಸವಿ ಜನಾಂಗದ ಮಕ್ಕಳಿಗೆ ಕಲಿಸಬೇಕು. ರಾಜ್ಯದಲ್ಲಿ ನೂರರಿಂದ ನೂರ ಇಪ್ಪತ್ತು ಶಿಕ್ಷಣ ಸಂಸ್ಥೆಗಳಿವೆ. ಆರ್ಯವೈಶ್ಯ ಜನಾಂಗ ಶಿಕ್ಷಣಕ್ಕೆ ಒತ್ತು ಕೊಟ್ಟು ಮಕ್ಕಳನ್ನು ಸಮಾಜಮುಖಿಯಾಗಿ ಬೆಳೆಸಿ ಎಂದರು.

## ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮಾದಿಗ ಯುವ ಸೇನೆಯಿಂದ ಪ್ರತಿಭಾ ಪುರಸ್ಕಾರ



» ಚಿತ್ರದುರ್ಗ

ಮತಗಳನ್ನು ಮೌಲ್ಯ ಮಾಡಿಕೊಂಡು ಚುನಾವಣೆಯಲ್ಲಿ ಯೋಗ್ಯರನ್ನು ಆಯ್ಕೆ ಮಾಡಿಕೊಳ್ಳುವ ಬದಲು ಮಾರಾಟ ಮಾಡಿದರೆ ಪ್ರಜಾಪ್ರಭುತ್ವ ನಾಶವಾಗುವುದರಲ್ಲಿ ಸಂದೇಹವಿಲ್ಲ ಎಂದು ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಪ್ರೊ.ಸಿ.ಕೆ.ಮಹೇಶ್ ಹೇಳಿದರು.

ಜಿಲ್ಲಾ ಮಾದಿಗ ಯುವ ಸೇನೆ, ಕಣಿವೆ ಮಾರಮ್ಮ ಸಂಘ, ಸ್ಲಂ ಜನಾಂದೋಲನ-ಕರ್ನಾಟಕ ಇವುಗಳ ಸಂಯುಕ್ತಾಶ್ರಯದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ, ಡಾ.ಬಾಬು ಜಗಜೀವನರಾಂರವರ ಪುಣ್ಯತಿಥಿ ಅಂಗವಾಗಿ ಎಸ್.ಎಸ್.ಎಲ್.ಸಿ.ಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪತ್ರಕರ್ತರ ಭವನದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಪ್ರತಿಭಾ ಪುರಸ್ಕಾರ ಉದ್ಘಾಟಿಸಿ ಮಾತನಾಡಿದರು.

ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಆಶಯಗಳನ್ನಿಟ್ಟುಕೊಂಡು ವಿದ್ಯಾರ್ಥಿಗಳು ಓದಿನ ಕಡೆ ಹೆಚ್ಚು ಗಮನ ಕೊಟ್ಟಾಗ ಮಾತ್ರ ಸಮಾಜಮುಖಿಯಾಗಿ ಹೊರಹೊಮ್ಮಬಹುದು. ಉದ್ಯಮಿಗಳು ಚುನಾವಣೆಗೆ ನಿಂತು ಗೆಲ್ಲುತ್ತಾರೆಂದರೆ ವಿಧಾನಸಭೆಯಲ್ಲಿ ಬಡವರ ಅಭ್ಯುದಯದ ಬಗ್ಗೆ ಧ್ವನಿ ಎತ್ತುವವರ್ಯಾರು ಎಂದು ಪ್ರಶ್ನಿಸಿದ ಪ್ರೊ.ಸಿ.ಕೆ.ಮಹೇಶ್ ಶೇ. 96 ಭಾಗದಷ್ಟು ಕೋಟ್ಯಾಧಿಪತಿಗಳೆ ಚುನಾವಣೆಯಲ್ಲಿ ಗೆಲ್ಲುವಂತಾಗಿದೆ ಎಂದು ವಿಷಾಧಿಸಿದರು.

ಕಟ್ಟ ಕಡೆಯ ಮನುಷ್ಯನಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬದಲು ಕಾಂಗ್ರೆಸ್‌ನವರು ಚುನಾವಣಾ ಪೂರ್ವದಲ್ಲಿಯೇ ಐದು ಗ್ಯಾರೆಂಟಿಗಳನ್ನು ಘೋಷಿಸಿದ್ದರಿಂದ ಅಧಿಕಾರಕ್ಕೆ ಬರಲು ಸಾಧ್ಯವಾಯಿತು. ಆರ್.ಎಸ್.ಎಸ್. ಬಿಜೆಪಿ.ಯನ್ನು ಹೊರತುಪಡಿಸಿದರೆ ಇದು ಕೂಡ ಒಂದು ರೀತಿಯ ನಯವಂಚಕತನ ಎನ್ನುವುದರಲ್ಲಿ ಅನುಮಾನವಿಲ್ಲ. ಈಗಲಾದರೂ ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು ಇಂತಹ ನಯವಂಚಕತನದ ವಿರುದ್ದ ಎಚ್ಚೆತ್ತುಕೊಂಡು ಬ್ರಾಹ್ಮಣ್ಯರ ವಿರುದ್ದ ರಾಜಕೀಯ ತೆರೆ ಎಳೆಯಬೇಕಾಗಿದೆ ಎಂದು ಜಾಗೃತಿಗೊಳಿಸಿದರು.

ಅಂಬೇಡ್ಕರ್ ಸಿದ್ದಾಂತವನ್ನು ಕೈಗೆತ್ತಿಕೊಂಡು ಬುದ್ದನ ಕಡೆ ಹೋದಾಗ ಮಾತ್ರ ಅಮೂಲ್ಯವಾದ ಮತಗಳನ್ನು ಮೌಲ್ಯ ಮಾಡಿಕೊಳ್ಳಬಹುದು. ಇದು ಅಂಬೇಡ್ಕರ್‌ರವರ ಆಶಯವೂ ಕೂಡ ಆಗಿತ್ತು ಎನ್ನುವುದನ್ನು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿದರು.

**ಪ್ರಮುಖ ಸುದ್ದಿ**

# ಲಿಂಗಾಯಿತ ಧರ್ಮವನ್ನು ಜಾಗತೀಕರಿಸುವುದರಿಂದ ಭಾರತ ವಿಶ್ವಗುರುವಾಗಲು ಸಾಧ್ಯ: ಮಲ್ಲಿಕಾರ್ಜುನಪ್ಪ

» ಚಿತ್ರದುರ್ಗ

ಭಾರತ ವಿಶ್ವಗುರುವಾಗುತ್ತ ಹೆಜ್ಜೆಯಿಡಲು ಇಚ್ಚಿಸಿರುವುದು ಯಶಸ್ವಿಯಾಗಬೇಕಾದರೆ ಹನ್ನೆರಡನೆ ಶತಮಾನದ ಬಸವಾದಿ ಶರಣರು ಕಟ್ಟಿದ ಲಿಂಗಾಯಿತ ಧರ್ಮವನ್ನು ಜಾಗತೀಕರಿಸುವುದರಿಂದ ಮಾತ್ರ ಸಾಧ್ಯ ಎಂದು ಆರ್ಥಿಕ ಚಿಂತಕ ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪ ಹೇಳಿದರು.

ಜಾಗತಿಕ ಲಿಂಗಾಯಿತ ಮಹಾಸಭಾ ಜಿಲ್ಲಾ ಘಟಕ ಹಾಗೂ ಕೈಗಾರಿಕಾ ವಸಾಹತು ಸಹಯೋಗದೊಂದಿಗೆ ಬಸವ ಮಂಟಪದಲ್ಲಿ ನಡೆದ ವಿಶೇಷ ಉಪನ್ಯಾಸ ಮತ್ತು ಜಾಗತಿಕ ಲಿಂಗಾಯಿತ ಮಹಾಸಭಾ ಸದಸ್ಯತ್ವದ ಗುರುತಿನ ಚೀಟಿ ವಿತರಣಾ ಕಾರ್ಯಕ್ರಮದಲ್ಲಿ ಲಿಂಗಾಯತ ಸ್ವತಂತ್ರ ಧರ್ಮ ಹೇಗೆ, ಎಂತು ಎಂಬ ವಿಷಯ ಕುರಿತು ಉಪನ್ಯಾಸ ನೀಡಿದರು.

ಒಂದು ಕೈಯಲ್ಲಿ ಖಡ್ಗ, ಮತ್ತೊಂದು ಕೈಯಲ್ಲಿ ಧರ್ಮಗ್ರಂಥವನ್ನು



ಹಿಡಿದುಕೊಂಡು ಹೋಗುವುದಾಗಲಿ, ಮೌಢ್ಯ, ದ್ವೇಷ, ಅಸೂಯೆಗಳನ್ನು ಬೆಳೆಸಿಕೊಂಡು ಹೋಗುವ ಬದಲು ದಯೆಯೇ ಧರ್ಮದ ಮೂಲವಯ್ಯ ಎನ್ನುವ ನೆಲೆಯಲ್ಲಿ ನಡೆದಾಗ ಮಾತ್ರ ಸಾಮರಸ್ಯಯುತ, ಸಾಮಾಜಿಕ ಬದುಕು ಕಟ್ಟಿಕೊಳ್ಳಬಹುದು. ಇಂದಿನ ಯುವ ಜನಾಂಗವನ್ನು ನೈತಿಕ, ಆಧ್ಯಾತ್ಮಿಕ, ಆರ್ಥಿಕ ನೆಲೆಗಟ್ಟಿನಲ್ಲಿ ಬೆಳೆಸುವ ಕರ್ತವ್ಯ ಎಲ್ಲಾ ಸಂಘಟನೆಗಳ ಹಾಗೂ ನೇತಾರರದ್ದಾಗಬೇಕು ಎಂದರು.

ದೇಶಕ್ಕೆ ಮೊದಲು ಪ್ರಜಾಪ್ರಭುತ್ವವನ್ನು ಕೊಟ್ಟಿದ್ದು, ಬಸವಧರ್ಮ. ಲಿಂಗಾಯಿತ ಧರ್ಮವನ್ನು ಜಾತಿಯ ನೆಲೆಯಲ್ಲಿ ನೋಡಬಾರದು. ಲಿಂಗಾಯಿತ ಬಸವ ಧರ್ಮ ಎನ್ನುವುದು ಹುಟ್ಟಿನಿಂದಲ್ಲ. ಆಚರಣೆಯಿಂದ ಬರುವುದು. ಇಷ್ಟಲಿಂಗ ಪೂಜೆ ಎಂದರೆ ವಿಶ್ವದ ಸಂಕೇತ. ದ್ವೇಷ, ಅಸೂಯೆ, ಯಾವುದೇ ಪಕ್ಷದ ಜೊತೆ ಗುರುತಿಸಿಕೊಳ್ಳುವುದಾಗಲಿ ಮಾಡಿದಾಗ ಭಾರತ ವಿಶ್ವಗುರುವಾಗುವುದಿಲ್ಲ. ವಿಜ್ಞಾನ, ತಂತ್ರಗಾರಿಕೆ ಮುಂದುವರೆದಂತೆಲ್ಲಾ ಮಕ್ಕಳು ತಂದೆ-ತಾಯಿಗಳಿಗೆ ಅಪಮಾನ ಮಾಡುವ ಸ್ಥಿತಿಯಲ್ಲಿರುವುದು ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

ಮೌಢ್ಯದ ಹಿಂದೆ ಹೋಗುವುದಕ್ಕಿಂತ ವೈಚಾರಿಕತೆ ಜೊತೆ ಸಾಗಿದಾಗ ಅಭಿವೃದ್ದಿ ಕಂಡುಕೊಳ್ಳಬಹುದು. ಹಾಗಾಗಿ ವೈದ್ದಿಕದ ವಿರುದ್ದ ಹೋರಾಡಿದ ಬುದ್ದ, ಬಸವಣ್ಣನವರ ಚಿಂತನೆಗಳು ಪ್ರಸ್ತುತ ಮುಖ್ಯ. ಜ್ಯೋತಿಷಿಗಳು ವಂಚನೆ ಮಾಡುವ ಕೈಚಳಕ ಹೊಂದಿದ್ದಾರೆ. ಗ್ರಹ, ನಕ್ಷತ್ರಗಳು ಎಂದೇಳಿಕೊಂಡು ದಿಕ್ಕುತಪ್ಪಿಸುತ್ತಿರುವುದರ ವಿರುದ್ದ ಎಲ್ಲರೂ ಜಾಗೃತರಾಗಬೇಕು. ಲಿಂಗಾಯಿತ ಸ್ವತಂತ್ರ ಧರ್ಮ ಎಂದು ಕೇಂದ್ರಕ್ಕೆ ಕೊಟ್ಟಿರುವ ಮನವಿ ಹಿಂದಕ್ಕೆ ಬಂದಿದೆ. ಅದಕ್ಕಾಗಿ ವೈಜ್ಞಾನಿಕ ನೆಲೆಯ ಸಂಘಟನೆ ಮೂಲಕ ಹೋಗಬೇಕು. ಜಾಗತಿಕ ಲಿಂಗಾಯಿತ ಮಹಾಸಭಾ ಹುಟ್ಟಿಕೊಂಡಿರುವುದು ಧರ್ಮ ಒಡೆಯಲಿಕ್ಕೆ ಎನ್ನುವುದಾದರೆ ಹೇಗೆ ಎಂದು ಪ್ರಶ್ನಿಸಿದ ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪ ಜಾತಿ ಒಡೆಯುತ್ತದೆ. ಧರ್ಮ ಒಗ್ಗೂಡಿಸುತ್ತದೆ ಎಂದು ಜಾತಿ ಮತ್ತು ಧರ್ಮಕ್ಕಿರುವ ವ್ಯತ್ಯಾಸವನ್ನು ತಿಳಿಸಿದರು.

## ಫಾಸ್ಟ್ ನ್ಯೂಸ್

### ಪ್ರತಿಭಾ ಪುರಸ್ಕಾರ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಲಿಂಗಾಯತ ಶಿವಶಿಂಪಿ ಸಮಾಜದವತಿಯಿಂದ ಕುಲಗುರು ದಾಸಿಮಯ್ಯ ಜಯಂತಿಯ ಅಂಗವಾಗಿ ಪ್ರತಿಭಾ ಪುರಸ್ಕಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧ್ಯಕ್ಷರಾದ ಇ.ಎಸ್.ಜಯದೇವ ಮೂರ್ತಿ ತಿಳಿಸಿದ್ದಾರೆ.2022–23ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿಯಲ್ಲಿ ಉತೀರ್ಣರಾದ ಜಿಲ್ಲೆಯ ಶೇ.85ಕ್ಕಿಂತ ಹೆಚ್ಚಿಗೆ ಅಂಕಗಳನ್ನು ಪಡೆದವರು ಹಾಗೂ ಹೂರ ಜಿಲ್ಲೆಯವರು ಶೇ.95ಕ್ಕಿಂತ ಹೆಚ್ಚಿನ ಅಂಕವನ್ನು ಪಡೆದ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳಿಗೆ ಬೆಳ್ಳಿ ಪದಕ ಮತ್ತು ಪ್ರಶಂಸಾ ಪತ್ರವನ್ನು ನೀಡಲಾಗುವುದು. ವಿದ್ಯಾರ್ಥಿಗಳು ತಮ್ಮ ಆಧಾರ್ ಕಾರ್ಡ್‌ಪ್ರತಿ ಅಂಕಪಟ್ಟಿ ಪ್ರತಿ ಹಾಗು ಒಂದು ಪಾಸ್ ಪೋರ್ಟ್ ಸೈಜಿನ ಭಾವಚಿತ್ರವನ್ನು ಇ.ಎಸ್.ಜಯದೇವ ಮೂರ್ತಿ ಅಧ್ಯಕ್ಷರು. ಅನು ಗ್ರಾಫಿಕ್ ಸೆಂಟರ್ ಧರ್ಮ ಶಾಲಾ ರಸ್ತೆ ಐಯಣ್ಣನ ಪೇಟೆ ಚಿತ್ರದುರ್ಗ ಈ ವಿಳಾಸಕ್ಕೆ ದಿನಾಂಕ 25–07–23 ಒಳಗಾಗಿ ಕೊಡಲು ವಿನಂತಿ, ಅನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ತಿಳಿಸಿದ್ದಾರೆ.

### ಹಿರಿಯ ನಾಗರಿಕರ ಸೇವಾ ಪ್ರಶಸ್ತಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಹಿರಿಯ ನಾಗಕರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಿ ಉತ್ತಮ ಸೇವೆ ಸಲ್ಲಿಸಿದ ವಯೋಶ್ರೇಷ್ಠರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಶಿಕ್ಷಣ ಕ್ಷೇತ್ರ, ಸಾಹಿತ್ಯ ಕ್ಷೇತ್ರ, ಕಾನೂನು, ಪ್ರತಿಭೆ, ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ ಗಣನೀಯ ಸೇವೆ ಸಲ್ಲಿಸುತ್ತಿರುವ ಹಿರಿಯ ನಾಗರಿಕರು ಹಾಗೂ ಸ್ವಯಂ ಸೇವಾ ಸಂಸ್ಥೆಗಳು ಅರ್ಜಿ ಸಲ್ಲಿಸಬಹುದು. ಅಕ್ಟೋಬರ್ 1 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ ರಾಜ್ಯಮಟ್ಟದಲ್ಲಿ ಆಚರಿಸುವ ಸಂದರ್ಭದಲ್ಲಿ, ಪ್ರಶಸ್ತಿಗೆ ಭಾಜನರಾದ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 1 ಸಂಸ್ಥೆಗೆ ಪ್ರಶಸ್ತಿ ಸೇರಿದಂತೆ ಒಟ್ಟು 7 ಪ್ರಶಸ್ತಿಗಳನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ವಿಕಲಚೇನತರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಛೇರಿ ದೂರವಾಣಿ ಸಂಖ್ಯೆ 08194–235284 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.


### ತಂತಿ ಬೇಲಿಯಲ್ಲಿ ವಿದ್ಯುತ್ ಹರಿದು ಬಾಲಕ ಸಾವು

» **ಹೊಸದುರ್ಗ**

ಜಮೀನಿನ ಭದ್ರತೆಗಾಗಿ ಹಾಕಲಾಗಿದ್ದ ತಂತಿ ಬೇಲಿಯಲ್ಲಿ ವಿದ್ಯುತ್ ಹರಿಯುತ್ತಿದ್ದು, ಬಾಲಕನೋರ್ವ ಅರಿವಿಲ್ಲದೆ ವಿದ್ಯುತ್ ತಂತಿಯನ್ನು ಮುಟ್ಟಿದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲ್ಲೂಕಿನ ಕಬ್ಬಳ ಗ್ರಾಮದ ಹೊರವಲಯದಲ್ಲಿ ನಡೆದಿದೆ. ಮೃತ ಬಾಲಕನನ್ನು ಕಬ್ಬಳ ಗ್ರಾಮದ 9 ನೇ ತರಗತಿ ಓದುತ್ತಿದ್ದ ಗಿರೀಶ (16) ಎಂದು ಗುರುತಿಸಲಾಗಿದೆ. ಈತನು ಎನ್.ಜಿ. ಹಳ್ಳಿಯ ಸರ್ಕಾರಿ ಶಾಲೆಯಲ್ಲಿ 9 ನೇ ತರಗತಿ ವ್ಯಾಸಂಗ ಮಾಡುತ್ತಿದ್ದರು. ಭಾನುವಾರ ಶಾಲೆಗೆ ರಜೆ ಇದ್ದ ಕಾರಣ ತನ್ನ ತಂದೆ ಕುರಿ ಮೇಯಿಸಲು ಜಮೀನಿಗೆ ಹೋಗಿರಬಹುದು ಎಂದು ಊಹಿಸಿ, ತಂದೆ ಹುಡುಕುತ್ತಾ ಗಿರೀಶ್ ಎಂಬುವವರ ಜಮೀನಿಗೆ ಬರುತ್ತಿದ್ದ. ಅದೇ ವೇಳೆಯಲ್ಲಿ ಅವನ ಜೊತೆಯಲ್ಲಿದ್ದ ನಾಯಿ ಕಂಬದ ತಂತಿಯ ನಡುವೆ ನುಸಿಯಲು ಹೋಗಿದ್ದು, ಆಗ ನಾಯಿ ಚೀರಾಡಿದೆ. ಕೂಡಲೇ ಗಿರೀಶ್ ನಾಯಿ ಕಂಬಕ್ಕೆ ತಗುಲಿರುವ ತಂತಿಯಲ್ಲಿ ಸಿಲುಕಿರಬಹುದೆಂದು ಊಹಿಸಿ, ನಾಯಿಯನ್ನು ಮುಟ್ಟಿ ಎಳೆಯಲು ಹೋದಾಗ ಅವನಿಗೂ ವಿದ್ಯುತ್ ತಗುಲಿ ಸಾವನ್ನಪ್ಪಿದ್ದಾನೆ. ಜಮೀನಿನ ಮಾಲೀಕ ಗಿರೀಶ್ ಎಂಬುವವರು ಜಮೀನಿಗೆ ನೀರು ಹರಿಸುವ ಸಲುವಾಗಿ ತನ್ನ ಜಮೀನಿನಲ್ಲಿದ್ದ ಪಂಪ್ ಸೆಟ್ ಮೋಟಾರ್ ಆನ್ ಮಾಡಿ ಬಿಟ್ಟಿದ್ದಾರೆ. ಮೋಟಾರ್ ಗೆ ಹೊಂದಿಕೊಂಡಿದ್ದ ವೈರ್ ತಂತಿ ಕಂಬದ ಕೆಳಗೆ ಹಾದು ಹೋಗಿತ್ತು. ಅದು ನಾಯಿ ನುಗಿದ ಜಾಗದಲ್ಲೇ ಡ್ಯಾಮೇಜ್ ಆಗಿ ಈ ಘಟನೆ ನಡೆದಿದೆ. ಈ ಕುರಿತು ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಕೇರಳ ಮಾಜಿ ಸಿಎಂ ಉಮ್ಮನ್ ಚಾಂಡಿ ನಿಧನ

» **ಬೆಂಗಳೂರು**



ಕ್ಯಾನ್ಸರ್‌ನಿಂದ ಬಳಲುತ್ತಿದ್ದ ಕೇರಳದ ಮಾಜಿ ಮುಖ್ಯಮಂತ್ರಿ, ಕಾಂಗ್ರೆಸ್ ಹಿರಿಯ ನಾಯಕ ಉಮ್ಮನ್ ಚಾಂಡಿ (79) ಕೊನೆಯುಸಿರೆಳೆದಿದ್ದಾರೆ. ಫೆಬ್ರುವರಿ 12ರಂದು ಬೆಂಗಳೂರಿನ ಚಿನ್ಮಯಿ ಆಸ್ಪತ್ರೆಗೆ ದಾಖಲಾಗಿದ್ದು. ಚಿಕಿತ್ಸೆ ಫಲಕಾರಿಯಾಗದೇ ಇಂದು ಬೆಳಗ್ಗಿನ ಜಾವ 4.25ರ ಸುಮಾರಿಗೆ ಆಸ್ಪತ್ರೆಯಲ್ಲಿ ವಿಧಿವಶರಾಗಿದ್ದಾರೆ. ಕೇರಳ ಕಾಂಗ್ರೆಸ್ ರಾಜ್ಯಾಧ್ಯಕ್ಷ ಕೆ. ನಟರಾಜ್‌ನ್ ಟ್ವಿಟ್ಟರ್ ಮೂಲಕ ಖಚಿತಪಡಿಸಿದ್ದಾರೆ. ಮ್ಮನ್ ಚಾಂಡಿ ನಿಧನಕ್ಕೆ ಕೇರಳ ಹಾಲಿ ಸಿಎಂ ಪಿಣರಾಯಿ ವಿಜಯನ್ ಟ್ವೀಟ್ ಮೂಲಕ ಸಂತಾಪ ಸೂಚಿಸಿದ್ದಾರೆ.

# ಕಲಾವಿದ ಆರಾಧ್ಯರ ಕಲೆ ಹೆಚ್ಚು ಖ್ಯಾತಿಗಳಿಸಲಿ

» **ಚಳ್ಳಕೆರೆ**




ಕನ್ನಡ ಚಿತ್ರರಂಗದಲ್ಲಿ ತನ್ನದೇಯಾದ ವಿಶೇಷ ಖ್ಯಾತಿಯನ್ನು ಗಳಿಸಿದ ಮಂಡ್ಯದ ಗಂಡು ಖ್ಯಾತಿಯ ಹಿರಿಯ ನಟ ಅಂಬರೀಶ್ ಇಂದು ನಮ್ಮಲ್ಲಿಲ್ಲವಾದರೂ ಅವರ ನಟನೆಯನ್ನೇ ಅನುಸರಿಸಿ ಜನರಿಗೆ ಮನೋರಂಜನೆ ನೀಡುವ ಅನೇಕ ಕಲಾವಿದರು ಇಂದು ನಮ್ಮ ಮುಂದೆ ಇದ್ದಾರೆ.ವಿಶೇಷವಾಗಿಭದ್ರಾವತಿತಾಲ್ಲೂಕಿನ ಗೋಣಿಬೀಡು ಗ್ರಾಮದ ಹಿರಿಯ ಕಲಾವಿದ ಆರಾಧ್ಯ ಅಂಬರೀಶ್‌ರವರು ನಡೆಸಿದ ಹಲವಾರು ಚಿತ್ರಗಳ ನಟನೆ, ನೃತ್ಯಗಳನ್ನು ಲೀಲಾಜಾಲವಾಗಿ ನಟಿಸುವ ಮೂಲಕ ಎಲ್ಲರ ಮನಸೂರಿಗೊಳಿಸಿದ್ದಾರೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ರೋಟರಿ ಬಾಲಭವನದಲ್ಲಿ ರಂಗಕಲಾವಿದ ಆರಾಧ್ಯರವರ ಜೂನಿಯರ್ ಅಂಬರೀಶ್ ನಡೆಸಿಕೊಟ್ಟ ನಟನೆ ಹಾಗೂ ಅಭಿನಯನವನ್ನು ವೀಕ್ಷಿಸಿ ಮಾತನಾಡಿದರು. ಕಳೆದ ಸುಮಾರು 40 ವರ್ಷಗಳಿಂದ ಆರಾಧ್ಯರವರು ಕನ್ನಡ ಚಿತ್ರರಂಗದ ಶ್ರೇಷ್ಠನಟ ಡಾ.ವಿಷ್ಣುವರ್ಧನ್‌ರವರ ಅಭಿನಯವನ್ನು ಸಹ ಅನುಕರಣೆ ಮಾಡುತ್ತಾ ಬಂದಿರುವುದು ಸಂತೋಷದಾಯಕ. ಇಂತಹ ಮೇರು ನಟದ ಅನುಕರಣೀಯ ಮೂಲಕ ಅಂಬರೀಶ್, ವಿಷ್ಣುವರ್ಧನ್‌ರವರ ನಟನೆಗೆ ಜೀವ ತುಂಬಿ ಅಭಿನಯಿಸುವ ಮೂಲಕ ಅವರ ಹೆಸರು ಎಲ್ಲರ ಮನದಲ್ಲಿ ಶಾಶ್ವವಾಗಿರುವಂತೆ ಮಾಡಿದ್ದಾರೆ. ಇವರಲ್ಲಿರುವ ಹಿರಿಯ ನಟರ ಅನುಕರಣೆ ಅತ್ಯಂತ ನೈಜ್ಯವಾಗಿದ್ದು, ಈ ಕಲೆ ಈಗೆ ಮುಂದುವರೆಸಲಿ. ಕಲಾವಿರನ್ನು ಎಲ್ಲರೂ ಹೆಚ್ಚು ಪ್ರೊತ್ಸಾಹಿಸಬೇಕೆಂದು ತಿಳಿಸಿದರು.

ಜೂನಿಯರ್ ಅಂಬರೀಶ್, ಕಲಾವಿದ ಆರಾಧ್ಯ ಮಾತನಾಡಿ, ಕರ್ನಾಟಕದ ವಿವಿಧೆಡೆಗಳಲ್ಲಿ ನಾನು ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಈ ಮಹಾನ್ ನಟರ ಅನುಕರಣೆಯನ್ನು ಕಲೆಯ ಮೂಲಕ ಜನರಿಗೆ ಪ್ರದರ್ಶಿಸಿದ್ದೇನೆ. ಎಲ್ಲೆಡೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಶಾಸಕರೂ ಸಹ ನನ್ನ ನಟನೆಯನ್ನು ಮೆಚ್ಚಿಕೊಂಡು ಶುಭಹಾರೈಸಿದ್ದಾರೆ. ವಿಶೇಷವಾಗಿ ರಂಗಭೂಮಿಯಿಂದ ಚಿತ್ರರಂಗ ಹಾಗೂ ಹವ್ಯಾಸಿ ಕಲಾವಿದರಿಗೆ ಚಿತ್ರಗಳಲ್ಲಿ ನಟಿಸುವ ನಟರಿಗೆ ಹೆಚ್ಚು ಸಮಸ್ಯೆಗಳಿದ್ದು ಅವುಗಳನ್ನು ಸರ್ಕಾರ ನಿವಾರಣೆ ಮಾಡುವಂತೆ ಶಾಸಕರು ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಮನವಿ ಮಾಡಿದರು.

ರೋಟರಿ ಕ್ಲಬ್‌ನ ನೂತನ ಅಧ್ಯಕ್ಷ ಕೆ.ನಾಗೇಶ್, ಲ್ಯಾಬ್ ಟೆಕ್ನಿಷನ್ ಎಂ.ಎನ್. ಮುತ್ಯುಂಜಯ, ನೇತಾಜಿಪ್ರಸನ್ನ, ಬಿ.ಫರೀದ್‌ಖಾನ್, ಆರ್.ಪ್ರಸನ್ನಕುಮಾರ್ ಮುಂತಾದವರು ಉಪಸ್ಥಿತರಿದ್ದರು.

### ಕ್ಷಯ ರೋಗಿಗಳಿಗೆ ಉಚಿತ ಚಿಕಿತ್ಸೆ –ಡಿ.ಹೆಚ್.ಓ. ಡಾ.ರಂಗನಾಥ

# ಕ್ಷಯ ಪತ್ತೆಗೆ: ಮನೆ ಭೇಟಿ ಆಂದೋಲನ

» **ಚಿತ್ರದುರ್ಗ**



ಜಿಲ್ಲೆಯಾದ್ಯಂತ ಜುಲೈ 17 ರಿಂದ 28 ವರೆಗೆ ಸಕ್ರಿಯ ಕ್ಷಯ ರೋಗ ಪತ್ತೆಗೆ ಮನೆ ಭೇಟಿ ಆಂದೋಲನ ಹಮ್ಮಿಕೊಳ್ಳಲಾಗಿದೆ. ಸಾಮಾಜಿಕ ಹಾಗೂ ಆರ್ಥಿಕವಾಗಿ ದುರ್ಬಲ ವರ್ಗದವರನ್ನು ಕೇಂದ್ರೀಕೃತವಾಗಿಸಿಕೊಂಡು ಮನೆ ಮನೆ ಭೇಟಿಯ ಮೂಲಕ ಸಕ್ರಿಯವಾಗಿ ಕ್ಷಯರೋಗ ಪತ್ತೆ ಕಾರ್ಯ ನಡೆಸಲಾಗುವುದು. ರೋಗ ಕಂಡುಬಂದವರಿಗೆ ಸರ್ಕಾರದ ವೆಚ್ಚದಲ್ಲಿ ಉಚಿತ ಚಿಕಿತ್ಸೆ ನೀಡಲಾಗುತ್ತದೆ ಎಂದು ಡಿಹೆಚ್‌ಒ ಡಾ.ಆರ್.ರಂಗನಾಥ ಹೇಳಿದರು.

ಸೋಮವಾರ ಚಿತ್ರದುರ್ಗ ತಾಲೂಕಿನ ದೊಡ್ಡ ಸಿದ್ದವನಹಳ್ಳಿ, ಕಾಸವರಹಟ್ಟಿ ಬೆಳಗಟ್ಟ ನಗರ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ ಕ್ಷಯ ರೋಗ ಪತ್ತೆ ಅಂದೋಲನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು

ಭಾತರವು 2025ರ ವೇಳೆಗೆ ಕ್ಷಯ ರೋಗವನ್ನು ನಿರ್ಮೂಲನೆ ಮಾಡುವ ಗುರಿ ಹೊಂದಿದೆ. 'ಹೌದು ನಾವು ಟಿ.ಬಿ.ಯನ್ನು ಕೊನೆಗೊಳಿಸಬಹುದು' ಎಂಬದು 2023ರ ಘೋಷಣೆ. ಇದರಂತೆ ಮನೆ ಮನೆ ಭೇಟಿ ಸಮೀಕ್ಷೆ ರೋಗ ಪತ್ತೆ ನಿರ್ದಿಷ್ಟ ಚಿಕಿತ್ಸೆ ಸಮರ್ಪಕವಾಗಿ ನಡೆಸಿ ಎಲ್ಲರೂ ಒಂದಾಗಿ ಕ್ಷಯ ರೋಗ ಮುಕ್ತ ಜಿಲ್ಲೆಯನ್ನಾಗಿಸೋಣ ಎಂದು ತಿಳಿಸಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ ಗಿರೀಶ್ ಮಾತನಾಡಿ ಕ್ಷಯ ರೋಗಿಗಳೇ ಸೂಕ್ತ ಚಿಕಿತ್ಸೆಗಾಗಿ ಆರೋಗ್ಯ ಕೇಂದ್ರಗಳಿಗೆ ಬರುತ್ತಾರೆ. ಆದರೆ ಕ್ಷಯ ರೋಗ ಆಂದೋಲನದಲ್ಲಿ ಮನೆ ಮನೆ ಭೇಟಿ ನೀಡಿ ರೋಗಿಗಳನ್ನು ಹುಡಿಕಿ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ. ಕ್ಷಯ ರೋಗ ಎಂಬುದು ಸಂಪೂರ್ಣವಾಗಿ ಗುಣಪಡಿಸಬಹುದಾದ ರೋಗವಾಗಿದೆ. ಯಾವುದೇ ಕಳಂಕಿತ ಮನೋಭಾವವನ್ನು ಹೊಂದದೆ ರೋಗಿಗಳು ಚಿಕಿತ್ಸೆ ಪಡೆಯಬೇಕು ಎಂದು ಹೇಳಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್. ಮಂಜುನಾಥ್ ಮಾತನಾಡಿ ಜೋಡಿ ಚಿಕ್ಕೇನಹಳ್ಳಿ ಗ್ರಾಮದಲ್ಲಿ ಗುಂಪು ಸಭೆ ನಡೆಸಿ.

ನಿಮ್ಮ ಮನೆ ಬಾಗಿಲಿಗೆ ಬರುವ ಆಶಾ ಕಾರ್ಯಕರ್ತೆಯರು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳೊಂದಿಗೆ ತಾವುಗಳು ಸಹಕರಿಸಿ ಕ್ಷಯ ರೋಗ ಮುಕ್ತವನ್ನಾಗಿಸಲು ನಮ್ಮೊಂದಿಗೆ ಕೈಜೋಡಿಸಿ.

ಎರಡು ವಾರಕ್ಕಿಂತ ಹೆಚ್ಚು ಕೆಮ್ಮು, ರಾತ್ರಿ ವೇಳೆ ಜ್ವರ, ಬೆವರುವುದುರುವುದು, ತೂಕ ಇಳಿಕೆ, ಕಫದಲ್ಲಿ ರಕ್ತ ಬರುವುದು ಕ್ಷಯ ರೋಗದ ಸಾಮಾನ್ಯ ಲಕ್ಷಣಗಳು. ಕಫದಲ್ಲಿ ರಕ್ತ ಕಂಡು ಬಂದಲ್ಲಿ ಕಫ ಪರೀಕ್ಷೆಗೆಂದು ಫಾಲ್ಕನ್ ಟ್ಯೂಬ್‌ಗಳನ್ನು ನೀಡಲಾಗುತ್ತದೆ. ಅದರಲ್ಲಿ ಸರಿಯಾದ ಪ್ರಮಾಣದಲ್ಲಿ ಕಫವನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ನೀಡಬೇಕು. ರೋಗ ಪತ್ತೆ ಆದರೆ ಸೂಕ್ತ ಚಿಕಿತ್ಸೆ ನೀಡಲಾಗುತ್ತದೆ. ಕ್ಷಯರೋಗ ಹರಡುವಿಕೆಯನ್ನುನು ತಪ್ಪಿಸಲು ಮಾಸ್ಕ್ ಧರಿಸಿ, ಆರು ಅಡಿ ದೈಹಿಕ ಅಂತರವನ್ನು ಪಾಲಿಸಿ, ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ರೋಗಲಕ್ಷಣವಿರುವ ದೊಡ್ಡ ಸಿದ್ದವನಹಳ್ಳಿ ಗ್ರಾಮದ 14 ಹಾಗೂ ಜೋಡಿ ಚಿಕ್ಕೇನಹಳ್ಳಿ ಗ್ರಾಮದ 21 ಜನರಿಂದ ಕಫದ ಮಾದರಿಗಳನ್ನು ಪರೀಕ್ಷೆಗೆ ಸಂಗ್ರಹಿಸಲಾಯಿತು.

ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀಧರ್, ಭಾಗೇಶ್, ಮಾರುತಿ, ಪ್ರವೀಣ್, ಆರೋಗ್ಯ ಸುರಕ್ಷತಾ ಅಧಿಕಾರಿ ಆಶಾ, ಸಮುದಾಯ ಆರೋಗ್ಯ ಅಧಿಕಾರಿಗಳಾದ ಮಂಜುಶ್ರೀ, ಸುರೇಶ್, ಜಿಲ್ಲಾ ಕ್ಷಯರೋಗ ವಿಭಾಗದ ಮಹೇಂದ್ರ ಮಾರುತಿ, ಕೆಎಚ್‌ಪಿಟಿ ಸಮಾಲೋಚಕರಾದ ತಿಪ್ಪಮ್ಮ ಕೆಂಚಪ್ಪ ಸೇರಿದಂತೆ ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

## ದತ್ತಿ ಇಲಾಖೆ ದೇವಾಲಯಗಳಲ್ಲಿ ಮೊಬೈಲ್ ನಿಷೇಧಿಸಿದ ಸರ್ಕಾರ



» **ಬೆಂಗಳೂರು**

ರಾಜ್ಯದ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ದೇವಾಲಯಗಳ್ಲಲಿ ಮೊಬೈಲ್ ಬಳಕೆಯನ್ನು ನಿಷೇಧಿಸಿ ರಾಜ್ಯ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ.

ಈ ಕುರಿತಂತೆ ಇಂದು ಕಂದಾಯ ಇಲಾಖೆಯ ಧಾರ್ಮಿಕ ದತ್ತಿ ವಿಭಾಗದ ಸರ್ಕಾರದ ಅಧೀನ ಕಾರ್ಯದರ್ಶಿ ಕೆ.ಪಿ ಹೇಮಂತರಾಜು ಸುತ್ತೋಲೆ ಹೊರಡಿಸಿದ್ದು, ದೇವಾಲಯಗಳ ಆವರಣದಲ್ಲಿ ಇತ್ತೀಚಿನ ದಿನಗಳಲ್ಲಿ ಮೊಬೈಲ್ ಫೋನ್ ಬಳಕೆ ಹೆಚ್ಚಾಗಿರುವುದರಿಂದ ಭಕ್ತರು ದೇವಾಲಯಕ್ಕೆಆಗಮಿಸಿದಾಗ ಮೊಬೈಲ್ ಫೋನ್ ಬಳಕೆಯ ಶಬ್ದಗಳಿಂದ ದೇವಾಲಯದ ಸಿಬ್ಬಂದಿಗಳಿಗೂ ಹಾಗೂ ದೇವರ ದರ್ಶನಕ್ಕೆ ಬರುವ ಭಕ್ತರಿಗೂ ಏಕ ಮನಸ್ಸಿನಿಂದ ಧ್ಯಾನ ಪೂಜಾದಿಗಳನ್ನು ನಡೆಸಲು ತೊಂದರೆಯಾಗುತ್ತಿರುವ ಹಿನ್ನೆಲೆಯಲ್ಲಿ, ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ದೇವಾಲಯಗಳಲ್ಲಿ ದೇವರ ದರ್ಶನಕ್ಕೆ ಬರುವ ಭಕ್ತಾದಿಗಳು ದೇವರ ದರ್ಶನದ ಸಮಯದಲ್ಲಿ ತಮ್ಮ ಮೊಬೈಲ್ ಫೋನ್‌ಗಳನ್ನು ಸ್ವಿಚ್ ಆಫ್ ಮಾಡಿ, ದೇವರ ದರ್ಶನ ಮಾಡುವಂತೆ ಸೂಚಿಸಲಾಗಿದೆ ಎಂದಿದ್ದಾರೆ. ಇನ್ನೂ ಈ ಬಗ್ಗೆ ದೇವಾಲಯಗಳ ಸೂಚನಾ ಫಲಕಗಳಲ್ಲಿ ಅಗತ್ಯ ಸೂಚನೆಗಳನ್ನು ಪ್ರಕಟಿಸುವಂತೆ ಸೂಚಿಸಲಾಗಿದೆ. ಈ ಮೂಲಕ ಇನ್ನುಂದೆ ರಾಜ್ಯದ ದೇವಾಲಯಗಳಲ್ಲಿ ಭಕ್ತರು ಮೊಬೈಲ್ ಬಳಕೆ ಮಾಡುವುದನ್ನು ನಿಷೇಧಿಸಿ, ರಾಜ್ಯ ಸರ್ಕಾರ ಅಧಿಕೃತವಾಗಿ ಆದೇಶ ಹೊರಡಿಸಿದೆ.

## ನಿಗದಿಗಿಂತ ಹೆಚ್ಚು ಕಾಮಗಾರಿ: 8,506 ಕೋಟಿ ಬಾಕಿ: ಸಚಿವ

» **ಬೆಂಗಳೂರು**

ನಿಗದಿಯಾಗಿದ್ದ ಮೊತ್ತಕ್ಕಂತ ಮೂರುಪಟ್ಟು ಹೆಚ್ಚುವರಿ ಕಾಮಗಾರಿಗೆ ಹಿಂದಿನ ಸರ್ಕಾರ ಮಂಜೂರಾತಿ ನೀಡಿದ್ದರಿಂದ ದೊಡ್ಡಪ್ರಮಾಣದಲ್ಲಿ ಗುತ್ತಿಗೆದಾರರ ಬಾಕಿ ಉಳಿದುಕೊಂಡಿದೆ. ಮೇ ಅಂತ್ಯದವರೆಗೆ 8,506 ಕೋಟಿ ಬಾಕಿ ಇದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. ವಿಧಾನ ಪರಿಷತ್‌ನಲ್ಲಿ ಸೋಮವಾರ ಜೆಡಿಎಸ್‌ನ ಗೋವಿಂದರಾಜು ಅವರು ಕೋಲಾರ ಜಿಲ್ಲೆಯ ಗುತ್ತಿಗೆದಾರರಿಗೆ ನೀಡಬೇಕಾದ ಬಾಕಿ ಕುರಿತು ಮಂಡಿಸಿದ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಅವರು, 2023–24ನೇ ಸಾಲಿನ ಬಜೆಟ್‌ನಲ್ಲಿ 9 ಸಾವಿರ ಕೋಟಿ ಅನುದಾನ ಒದಗಿಸಲಾಗಿದೆ. ಪ್ರತಿ ತಿಂಗಳ ಬಾಕಿ ಆಧಾರದ ಮೇಲೆ ಹಂತಹಂತವಾಗಿ ವಿಭಾಗವಾರು ಹಣ ಬಿಡುಗಡೆ ಮಾಡಲಾಗುವುದು ಎಂದರು.

# ಸಿಎಂ ಜೆಡಿಎಸ್ ವಿಸರ್ಜನೆ ಹೇಳಿಕೆಗೆ ಎಚ್‌ಡಿಕೆ ಟಾಂಗ್

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕನ್ನಡ ಭಾಷೆಯ ಪರಿಜ್ಞಾನ ಇದೆ ಎಂದು ಭಾವಿಸಿದ್ದೆ. ಆದರೆ, ಅದು ಸುಳ್ಳು ಎನ್ನುವುದು ಈಚೆಗೆ ವಿಧಾನ ಪರಿಷತ್ ನಲ್ಲಿ ಅವರು ರಾಜ್ಯಪಾಲರ ಭಾಷಣದ ಮೇಲೆ ಉತ್ತರ ಕೊಟ್ಟಾಗ ನನಗೆ ಗೊತ್ತಾಯಿತು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ರವರು ಕುಟುಕಿದ್ದಾರೆ.ವಿಧಾನಸೌಧದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಅವರು; 123 ಕ್ಷೇತ್ರ ಗೆಲ್ಲದಿದ್ದರೆ ಜೆಡಿಎಸ್ ಪಕ್ಷವನ್ನು ವಿಸರ್ಜನೆ ಮಾಡುವುದಾಗಿ ಕುಮಾರಸ್ವಾಮಿ ಹೇಳಿದ್ದಾರೆ. ಈಗೆಲ್ಲಿ ವಿಸರ್ಜನೆ ಮಾಡಿದ್ದಾರೆ? ಎಂದು ನನ್ನನ್ನು ಪ್ರಶ್ನೆ ಮಾಡಿದ್ದಾರೆ. ಆದರೆ, ಅವರ ಅಜ್ಞಾನಕ್ಕೆ ನನ್ನ ಮರುಕವಿದೆ ಎಂದಿದ್ದಾರೆ.ನಾನು ಚುನಾವಣೆ ಪ್ರಚಾರ ಹಾಗೂ ಪಂಚರತ್ನ ರಥಯಾತ್ರೆಯಲ್ಲಿ ನೂರಾರು ಕಡೆ ಭಾಷಣ ಮಾಡಿದ್ದೇನೆ. ಪತ್ರಿಕೆಗಳ ವರದಿಗಳನ್ನು ನೋಡಲಿ, ವಿದ್ಯುನ್ಮಾನ ಮಾಧ್ಯಮಗಳ ವೀಡಿಯೊಗಳನ್ನು ವೀಕ್ಷಿಸಲಿ. ಆಮೇಲೆ ಈ ಬಗ್ಗೆ ಮುಖ್ಯಮಂತ್ರಿ ಮಾತನಾಡಲಿ ಎಂದು ಕುಮಾರಸ್ವಾಮಿ ಅವರು ಸಿಎಂಗೆ ಟಾಂಗ್ ನೀಡಿದ್ದಾರೆ. ನಾನು ಜನರನ್ನ ಕೇಳಿದ್ದು ಇಷ್ಟೇ. ನನಗೆ 123 ಸೀಟು ಕೊಡಿ. ಅಷ್ಟು ಸೀಟು ಕೊಟ್ಟ ಮೇಲೆ ನಾನು ಪಂಚರತ್ನ ಯೋಜನೆಗಳನ್ನು ಜಾರಿ ಮಾಡದೆ ಇದ್ದರೆ ಮುಂದೆಂದೂ ಮತ ಕೇಳಲು ನಿಮ್ಮ ಮನೆ ಬಾಗಿಲಿಗೆ ಬರುವುದಿಲ್ಲ,

## ಪ್ರಮುಖ ಸುದ್ದಿ

### ಹೆಚ್.ಪಿ.ಪಿ.ಸಿ. ಸರ್ಕಾರಿ ಕಾಲೇಜಿನಲ್ಲಿ ಹೊಸ ಕೋರ್ಸ್‌ಗೆ ಅನುಮೋದನೆ

# ಎಚ್.ಪಿ.ಪಿ.ಸಿ ಕಾಲೇಜಿಗೆ ಬಿಸಿಎ ಪ್ರವೇಶಕ್ಕೆ ಅನುಮತಿ

» **ಚಳ್ಳಕೆರೆ**

ನಗರದ ಹೆಚ್.ಪಿ.ಪಿ.ಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ 2023– 24ನೇ ಸಾಲಿನಲ್ಲಿ ಹೊಸ ಕೋರ್ಸ್‌ಗೆ ಉನ್ನತ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯು ಅನುಮೋದನೆ ನೀಡಿದೆ.

ಜುಲೈ 12ರಂದು ಇಲಾಖೆಯಿಂದ ಕಾಲೇಜಿನಲ್ಲಿ ಬಿಸಿಎ ಪದವಿ ಅಧ್ಯಯನಕ್ಕೆ ಅನುಮತಿ ಸಿಕ್ಕಿದೆ. 2023 24ನೇ ಶೈಕ್ಷಣಿಕ ಸಾಲಿಗೆ ಸೂಕ್ತ ಕೋರ್ಸ್ ಬೇಡಿಕೆ ಇರುವ ವಿಷಯವನ್ನು ಆಯ್ಕೆ ಮಾಡಿಕೊಳ್ಳುವಂತೆ ಇಲಾಖೆಯು ಕಾಲೇಜಿನ ಅಭಿಪ್ರಾಯವನ್ನು ಕೇಳಲಾಗಿತ್ತು. ಕಾಲೇಜಿನ ಎಲ್ಲಾ ವಿಭಾಗಗಳ ಮುಖ್ಯಸ್ಥರು ಮತ್ತು ಅಧ್ಯಾಪಕರ ಸಲಹೆ ಸೂಚನೆಯ ಮೇರೆಗೆ ಮೊಟ್ಟಮೊದಲ ಬಾರಿಗೆ ಕಾಲೇಜಿನಲ್ಲಿ ಬ್ಯಾಚುಲರ್ ಆಫ್ ಕಂಪ್ಯೂಟರ್ ಅಪ್ಲಿಕೇಶನ್(ಬಿಸಿಎ) ಎಂಬ ವಿನೂತನ ವಿಷಯವನ್ನು ಬೋಧಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಉನ್ನತ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಕಾಲೇಜಿಗೆ 120 ಸೀಟುಗಳ ಬಿಸಿಎ ಕೋರ್ಸ್ ತೆರೆಯಲು ಅನುಮತಿ ನೀಡಿದೆ. ಈಗಾಗಲೇ ಕಾಲೇಜಿನಲ್ಲಿ ಪ್ರಥಮ ವರ್ಷದ ಬಿಎ, ಬಿಎಸ್ಸಿ, ಬಿಕಾಂ, ಬಿಬಿಎ, ದೈಹಿಕಶಿಕ್ಷಣ ಪದವಿ ಸೇರಿದಂತೆ ಹಲವು ಕೋರ್ಸ್‌ಗಳಿಗೆ 600ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರವೇಶಾತಿಯನ್ನು ಪಡೆದಿದ್ದಾರೆ. ಇಂದಿನಿಂದ ಬಿಸಿಎ ಕೋರ್ಸ್ ಪ್ರವೇಶಾತಿಯನ್ನು ನೀಡಲಾಗುವುದು ಆಸಕ್ತ ವಿದ್ಯಾರ್ಥಿಗಳು ಕಾಲೇಜಿನ ಕಚೇರಿ ವೇಳೆಯಲ್ಲಿ ಬಂದು ಅರ್ಜಿಯನ್ನು ಪಡೆದು ಪ್ರವೇಶಾತಿ ಶುಲ್ಕವನ್ನು ಪಾವತಿಸಿ ಪ್ರವೇಶ ಪಡೆಯಬಹುದು. ಈ ಸಂಬಂಧ ಕಾಲೇಜಿನ ಪ್ರಾಚಾರ್ಯ ಡಾ.ಆರ್.ರಂಗಪ್ಪ, " ಮೊದಲಬಾರಿಗೆ ನಮ್ಮ ಕಾಲೇಜಿಗೆ ಬಿಸಿಎ ಕೋರ್ಸ್‌ಗೆ ಅನುಮೋಧನೆ ದೊರೆತಿದೆ. ಈಹಿಂದೆ ಈ ಕೋರ್ಸ್ ಕಲಿಯಲು ನೂರಾರು ವಿದ್ಯಾರ್ಥಿಗಳು ಬೆಂಗಳೂರು, ತುಮಕೂರು, ಶಿವಮೊಗ್ಗ, ಮೈಸೂರಿನ ಭಾಗಗಳಿಗೆ ತೆರಳಬೇಕಿತ್ತು. ಇದನ್ನು ಅರಿತು ನಮ್ಮ ಗ್ರಾಮೀಣ ಬಾಗದ ಮಕ್ಕಳಿಗೂ ಈ ಕೋರ್ಸ್ ಕಲಿಯಲು ಸಹಕಾರಿಯಾಗಬೇಕು ಎಂದು ಅರಿತು ಬಿಸಿಎ ಕೋರ್ಸ್‌ಗೆ ಬೇಡಿಕೆ ಸಲ್ಲಿಸಲಾಗಿತ್ತು. ನಮ್ಮ ಬೇಡಿಕೆಯನ್ನು ಮಾನ್ಯ ಮಾಡಿರುವ ಇಲಾಖೆಯು 120ಸೀಟ್‌ಗಳಿಗೆ ಅನುಮೋಧನೆ ನೀಡಿರುವುದು ಸಂತಸದ ಸಂಗತಿಯಾಗಿದೆ. ಅಷ್ಟೇಅಲ್ಲದೆ ಬಿಸಿಎ ಕೋರ್ಸ್ ಬೋಧನೆಗೆ ಅಗತ್ಯವಾದ ಹೊಸ ಕೊಠಡಿಗಳು, ಸುಸಜ್ಜಿತವಾದ ಕಂಪ್ಯೂಟರ್‌ಲ್ಯಾಬ್, ಗ್ರಂಥಾಲಯದಲ್ಲಿ ಪುಸ್ತಕಗಳ ಲಭ್ಯತೆ, ಇಂಟರ್ನೆಟ್, ಅತ್ಯಂತ ವೇಗದ ಉಚಿತ ವೈಫೈ ವ್ಯವಸ್ಥೆ ಕಲ್ಪಿಸಲಾಗಿದೆ. ಹಾಗೂ ನುರಿತ ಬೋಧಕರು ಗಣಕಶಾಸ್ತ್ರ ವಿಭಾಗದಲ್ಲಿ ಈಗಾಗಲೇ ಕಾರ್ಯ ನಿರ್ವಹಿಸುತ್ತಿದ್ದು, ಅಗತ್ಯವಿದ್ದರೆ ಹೆಚ್ಚುವರಿಯಾಗಿ ಉಪನ್ಯಾಸಕರನ್ನು ಆಯ್ಕೆಮಾಡಿಕೊಳ್ಳಲಾಗುವುದು ಎಂದು ತಿಳಿಸಿದರು.



> ಹಲವು ದಿನಗಳಿಂದ ಪ್ರಥಮವರ್ಷದ ಪದವಿ ಅಧ್ಯಯನಕ್ಕೆ ದಾಖಲಾತಿ ಪ್ರಕ್ರಿಯೆ ನಡೆಯುತ್ತಿದೆ. ದಿ.17ರಿಂದ 30ರವರೆಗೂ ರೂ.200 ದಂಡಶುಲ್ಕ ಪಾವತಿಸಿ ಪ್ರವೇಶಾತಿ ಪಡೆಯುವ ವ್ಯವಸ್ಥೆ ಇದೆ. ಹಾಗಾಗಿ ವಿಶ್ವವಿದ್ಯಾನಿಲಯವು ಬಿಸಿಎ ಪ್ರವೇಶಾತಿಗೆ ದಂಡಶುಲ್ಕವಿಲ್ಲದೆ ಮತ್ತು ಪ್ರವೇಶಾತಿಗೆ ದಿನಾಂಕ ಮುಂದೂಡಿದರೆ ನೀಡಿದರೆ ಗ್ರಾಮೀಣ ಭಾಗದ ಮಕ್ಕಳಿಗೆ ಅನುಕೂಲವಾಗಲಿದೆ
>
> » **ಡಾ.ಆರ್.ರಂಗಪ್ಪ. ಪ್ರಾಚಾರ್ಯರು. ಫೋಟೋ ಕಾಲೇಜು ಚಿತ್ರ.**

## ಫಾಸ್ಟ್ ನ್ಯೂಸ್

### ಉಣ್ಣೆ ಕೈಮಗ್ಗ ನಿಗಮದ ಅಧ್ಯಕ್ಷ ಬಿ.ಮಲ್ಲಿಕಾರ್ಜುನಪ್ಪ, ರೇವಣಸಿದ್ದಪ್ಪ ಉಪಾಧ್ಯಕ್ಷ



» **ಚಳ್ಳಕೆರೆ**

ಕರ್ನಾಟಕ ಖಾದಿಯೇತರ ಉಣ್ಣೆ ನಿಗಮದ ನೂತನ ರಾಜ್ಯಾಧ್ಯಕ್ಷರಾಗಿ ಚಳ್ಳಕೆರೆ ತಾಲ್ಲೂಕಿನ ಚಿಕ್ಕಮಧುರೆಯ ಹಿರಿಯ ನಿರ್ದೇಶಕ ಅಧ್ಯಕ್ಷರಾಗಿ ಬಿ.ಮಲ್ಲಿಕಾರ್ಜುನಪ್ಪ, ಉಪಾಧ್ಯಕ್ಷರಾಗಿ ಗುಲಬರ್ಗ ಜಿಲ್ಲೆಯ ಹೊನ್ನಹಳ್ಳಿಯ ರೇವಣಸಿದ್ದಪ್ಪ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಘೋಷಿಸಿದರು. ಅವರು, ಸೋಮವಾರ ಗೊರ್ಲಕಟ್ಟೆ ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಖಾದಿಯೇತರ ಉಣ್ಣೆ ಕೈಮಗ್ಗ ನಿಗಮ ನಿಯಮಿತ ಇದರ ನೂತನ ಅಧ್ಯಕ್ಷರು ಉಪಾಧ್ಯಕ್ಷರ ಚುನಾವಣೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡರು, ನಂತರ ಎಲ್ಲಾ ಸದಸ್ಯರ ಅಭಿಪ್ರಾಯದಂತೆ ನೂತನ ಅಧ್ಯಕ್ಷರು, ಉಪಾಧ್ಯಕ್ಷರ ಆಯ್ಕೆ ಅವಿರೋಧವಾಗಿ ಆಗಿದೆ ಎಂದು ಘೋಷಿಸಿದರು. ನೂತನ ಅಧ್ಯಕ್ಷ ಬಿ.ಮಲ್ಲಿಕಾರ್ಜನಪ್ಪ ಮಾತನಾಡಿ, ನನಗೆ ಎರಡನೇ ಬಾರಿಗೆ ಸಂಘದ ಎಲ್ಲಾ ನಿರ್ದೇಶಕರು ಸೇರಿ ಮತ್ತೊಮ್ಮೆ ಕಾರ್ಯನಿರ್ವಹಿಸುವ ಅವಕಾಶವನ್ನು ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಎಲ್ಲರ ವಿಶ್ವಾಸದೊಂದಿಗೆ ಇನ್ನೂ ಹೆಚ್ಚು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಿ ನಿಗಮದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ದುಡಿಯುವ ಭರವಸೆ ನೀಡಿದರು. ಈಗಾಗಲೇ ಉಣ್ಣೆ ಕೈಮಗ್ಗ ನಿಗಮಕ್ಕೆ ಹೆಚ್ಚಿನ ಅನುದಾನವೂ ಸೇರಿದಂತೆ ಹಲವಾರು ಬೇಡಿಕೆ ಈಡೇರಿಸಲು ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದು, ಶೀಘ್ರದಲ್ಲೇ ನಿಗಮದ ವತಿಯಿಂದ ನಿಯೋಗ ತೆರಳಿ ಒತ್ತಡ ಹೇರಲಾಗುವುದು ಎಂದರು. ಮಾಜಿ ಅಧ್ಯಕ್ಷ ಜಯರಾಂ, ಸಹಕಾರಿ ದುರೀಣ ಆರ್.ಮಲ್ಲೇಶಪ್ಪ, ಕಾರ್ಯದರ್ಶಿ ಗಂಗಾಧರ, ಮಾಜಿ ಕಾರ್ಯದರ್ಶಿ ಬಿ.ಪಾತಲಿಂಗಪ್ಪ, ಶರಣಪ್ಪ ಬೀರಾದರ್, ಶಿವರಾಜ್, ಪರಶುರಾಮ್, ಡಿ.ಆರ್. ಮಧುಕುಮಾರ್, ಜವಳಿ ನಿಗಮದ ಅಧಿಕಾರಿ ತಿಪ್ಪೇಸ್ವಾಮಿ, ಪಶುವೈದ್ಯಾಧಿಕಾರಿ ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

### ಎಂಪಿ ಚುನಾವಣೆಯಲ್ಲಿ ಬಿಜೆಪಿಗೆ ಚಿಪ್ಪು ಗ್ಯಾರಂಟಿ: ಸಚಿವ ತಂಗಡಗಿ

» **ಚಿತ್ರದುರ್ಗ**

ಮುಂಬರುವ 2024ರ ಲೋಕಸಭಾ ಚುನಾವಣೆಯಲ್ಲಿ ದೇಶದ ಜನ ಬಿಜೆಪಿಯವರಿಗೆ ಚಿಪ್ಪು ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರು ಲೇವಡಿ ಮಾಡಿದ್ದಾರೆ. ಶ್ರೀ ಸಿದ್ದರಾಮೇಶ್ವರ ಮಹಾಸಂಸ್ಥಾನದ ಭೋವಿ ಗುರುಪೀಠದ ಪೀಠಾಧ್ಯಕ್ಷ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳನ್ನು ಮಂಗಳವಾರ ಸಚಿವರು ಭೇಟಿಯಾದ ಬಳಿಕ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿ ಕಾಂಗ್ರೆಸ್ ನುಡಿದಂತೆ ನಡೆಯುವ ಪಕ್ಷ. ರಾಜ್ಯದಲ್ಲಿ ನಾಲ್ಕು ವರ್ಷಗಳ ಬಿಜೆಪಿ ದುರಾಡಳಿತದಿಂದ ಜನ ಬೇಸತ್ತು, ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತಂದಿದ್ದಾರೆ. ಬಿಜೆಪಿಯವರು ನಾಲ್ಕು ವರ್ಷ ಜನತೆಗೆ ಚಿಪ್ಪು ನೀಡಿದ್ದರು. ವಿಧಾನಸಭಾ ಚುನಾವಣೆಯಲ್ಲಿ ಜನ ಆ ಪಕ್ಷಕ್ಕೆ ಚಿಪ್ಪು ನೀಡಿದ್ದಾರೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿಯೂ ಬಿಜೆಪಿಗೆ ಜನ ಚಿಪ್ಪು ನೀಡುವುದು ಗ್ಯಾರಂಟಿ ಎಂದು ಛೇಡಿಸಿದರು. 9 ವರ್ಷದ ಹಿಂದೆ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ಸರ್ಕಾರ ಯಾವುದೇ ಅಭಿವೃದ್ಧಿ ಕೆಲಸವನ್ನು ಮಾಡಿಲ್ಲ. ವಿದೇಶದಿಂದ ಕಪ್ಪು ಹಣ ತರುತ್ತೇವೆ. ಉದ್ಯೋಗ ಸೃಷ್ಟಿ ಹಾಗೂ ರೈತರ ಆದಾಯ ದ್ವಿಗುಣಗೊಳಿಸುವುದಾಗಿ ಸುಳ್ಳು ಆಶ್ವಾಸನೆ ನೀಡುತ್ತಾ ಜನತೆಗೆ ಮೋಸ ಮಾಡಿದ್ದಾರೆ. ದೇಶದಲ್ಲಿ ಹರಾಜುಕತೆ ಸೃಷ್ಟಿಯಾಗಿದ್ದು, ಆರ್ಥಿಕ ಪರಿಸ್ಥಿತಿ ಸಂಪೂರ್ಣ ಹದಗೆಟ್ಟಿದೆ. 9 ವರ್ಷದಲ್ಲಿ ದೇಶ ಹಾಳು ಮಾಡಲು ಬೇಕಾದ ಕೆಲಸವನ್ನು ಬಿಜೆಪಿ ಮಾಡಿದೆ ಎಂದು ವಾಗ್ದಾಳಿ ನಡೆಸಿದರು.

**ವಿಪಕ್ಷದವರಿಗೆ ಬಾಯಿ ಚಪಲ:** ಕಾಂಗ್ರೆಸ್ ಪಕ್ಷ ಚುನಾವಣಾ ಪ್ರಣಾಳಿಕೆಯಲ್ಲಿ ತಿಳಿಸಿದಂತೆ ಐದು ಗ್ಯಾರಂಟಿಗಳನ್ನು ಜಾರಿಗೆ ತರುತ್ತಿದೆ. ಈಗಾಗಲೇ ಮೂರು ಗ್ಯಾರಂಟಿಗಳು ಜಾರಿಗೆ ಬಂದಿವೆ. ಮುಂದಿನ ತಿಂಗಳು ಪ್ರತಿ ಮಹಿಳೆಗೆ 2 ಸಾವಿರ ಹಣ ನೀಡುವ ಗೃಹ ಲಕ್ಷ್ಮೀ ಗ್ಯಾರಂಟಿ ಜಾರಿಗೆ ಬರಲಿದೆ. ಇದನ್ನು ಸಹಿಸಲು ಆಗದ ವಿಪಕ್ಷಗಳ ನಾಯಕರು ಬಾಯಿ ಚಪಲಕ್ಕೆ ಆರೋಪ ಮಾಡುತ್ತಿದ್ದಾರೆ. ರಾಜ್ಯ ವಿಪಕ್ಷ ನಾಯಕರಿಗೆ ಆರೋಪ ಮಾಡುವುದು ಚಾಳಿಯಾಗಿದೆ. ರೈತರ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣದ ಅಭಿವೃದ್ಧಿಗೆ ನಮ್ಮ ಸರ್ಕಾರ ಬದ್ಧವಾಗಿದೆ. ಎಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿ ಏನೆಲ್ಲಾ ಕಾರ್ಯಕ್ರಮ ರೂಪಿಸಿದ್ದಾರೆ ಎಂಬುದು ಜನತೆಗೆ ಗೊತ್ತಿದೆ. ಯಾವುದೇ ವಿಚಾರ ಇಲ್ಲದ ಕಾರಣಕ್ಕಾಗಿ ಸುಖಸುಮ್ಮನೆ ಆರೋಪ ಮಾಡುತ್ತಿದ್ದಾರೆ ಎಂದು ತಿಳಿಸಿದರು.

# ಆಧಾರ್ ನೋಂದಣಿ, ನವೀಕರಣಕ್ಕೆ ಕ್ರಮವಹಿಸಿ

## ಜಿಲ್ಲಾಮಟ್ಟದ ಆಧಾರ್ ಮೇಲ್ವಿಚಾರಣೆ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ಸೂಚನೆ

» **ಚಿತ್ರದುರ್ಗ**



ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಆಧಾರ್ ಅತ್ಯವಶ್ಯಕವಾಗಿದ್ದು, ಜಿಲ್ಲೆಯಲ್ಲಿ ಆಧಾರ್ ನೋಂದಣಿ ಹಾಗೂ ದಾಖಲಾತಿ ನವೀಕರಣಕ್ಕೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ಸೂಚನೆ ಅಧಿಕಾರಿಗಳಿಗೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಮಟ್ಟದ ಆಧಾರ್ ಮೇಲ್ವಿಚಾರಣೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಧಾರ್ ನೋಂದಣಿ, ದಾಖಲಾತಿ ನವೀಕರಣ ಕಡಿಮೆಯಾಗಿರುವ ಕಡೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಹಾಗೂ ದಾಖಲಾತಿ ನವೀಕರಣ ಪ್ರಕ್ರಿಯೆ ಕೈಗೊಳ್ಳಬೇಕು. ಹೆಚ್ಚಿನ ಜನಸಂಖ್ಯೆ ಹಾಗೂ ತಾಲ್ಲೂಕು ಹಾಗೂ ಹೋಬಳಿ ಕೇಂದ್ರಗಳಿಂದ ದೂರವಿರುವ ಗ್ರಾಮಗಳ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಹೆಚ್ಚುವರಿವಾಗಿ ಆಧಾರ್ ನೋಂದಣಿ ಕೇಂದ್ರಗಳನ್ನು ತೆರೆಯಬೇಕು. ಜಿಲ್ಲೆಯ ಜನರಿಗೆ ಆಧಾರ್ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ತಾಕೀತು ಮಾಡಿದರು.

ಖಾಯಿಲೆ, ಅಪಘಾತ ಇನ್ನಿತರೆ ಕಾರಣಗಳಿಂದ ಮನೆಯಲ್ಲಿ ಹಾಸಿಗೆಹಿಡಿದವರನ್ನು ಆಧಾರ್ ಕೇಂದ್ರಗಳಿಗೆ ಕರೆತರುವುದು ಕಷ್ಟಸಾಧ್ಯ. ಆಧಾರ್ ಕಾರ್ಡ್ ಇಲ್ಲದಿದ್ದರೆ ಸರ್ಕಾರ ವಿವಿಧ ಯೋಜನೆಗಳ ಪ್ರಯೋಜನೆ ಪಡೆದುಕೊಳ್ಳಲು ಸಾಧ್ಯವಾಗುವುದಿಲ್ಲ. ಹಾಗಾಗಿ ಜಿಲ್ಲೆಯಲ್ಲಿ ಖಾಯಿಲೆ, ಇನ್ನಿತರೆ ಕಾರಣಗಳಿಂದ ಹಾಸಿಗೆಹಿಡಿದವರ ಮಾಹಿತಿಯನ್ನು ಸಂಗ್ರಹಿಸಿ, ಸಂಬಂಧಪಟ್ಟ ಅಧಿಕಾರಿಗಳ ಶಿಫಾರಸ್ಸಿನೊಂದಿಗೆ, ಖುದ್ದಾಗಿ ಅವರ ಮನೆಗಳಿಗೆ ಭೇಟಿ ನೀಡಿ, ಆಧಾರ್ ನೋಂದಣಿ ಮಾಡಿಸಬೇಕು ಎಂದು ಆಧಾರ್ ಜಿಲ್ಲಾ ಸಂಯೋಜಕ ರಂಗನಾಥ್‌ಗೆ ಸೂಚನೆ ನೀಡಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಆಧಾರ್ ನೋಂದಣೆ ಕಡಿಮೆಯಾಗಿರುವ ಪ್ರದೇಶಗಳಲ್ಲಿ ಅಭಿಯಾನದ ಮೂಲಕ ನೋಂದಣಿ ಪ್ರಕ್ರಿಯೆಗೆ ಚಾಲನೆ ನೀಡಬೇಕು. ಸಾರ್ವಜನಿಕರ ಅಗತ್ಯಕ್ಕೆ ಅನುಗುಣವಾಗಿ ಹೆಚ್ಚುವರಿವಾಗಿ ನೋಂದಣಿ ಕೇಂದ್ರ ತೆರೆಯಲು ಯೋಜನೆ ರೂಪಿಸಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸಲಹೆ ನೀಡಿದರು.

ಡಾಕ್ಯೂಮೆಂಟ್ ಅಪ್ಡೇಟ್‌ಗೆ ಹೆಚ್ಚಿನ ಜಾಗೃತಿ ಮೂಡಿಸಿ: 10 ವರ್ಷದ ಹಳೆಯದಾದ ಆಧಾರ್‌ನ್ನು ಗುರುತಿನ ಹಾಗೂ ವಿಳಾಸದ ಪುರಾವೆಯೊಂದಿಗೆ ಡಾಕ್ಯೂವೆಂಟ್ ಅಪ್ಡೇಟ್ ಮಾಡಬೇಕಾಗಿದ್ದು, ಈ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸೂಚನೆ ನೀಡಿದರು.

ಜಿಲ್ಲೆಯ ಜನಸಂಖ್ಯೆಯ ಮಾಹಿತಿ ಪಡೆದು, ಅದರಲ್ಲಿ ಎಷ್ಟು ಜನರಿಗೆ ಆಧಾರ್ ನೋಂದಣಿ ಹಾಗೂ ದಾಖಲಾತಿ ನವೀಕರಣ ಮಾಡಲಾಗಿದೆ. ಎಷ್ಟು ಬಾಕಿ ಉಳಿದಿದೆ, ಯಾವ ತಾಲ್ಲೂಕಿನಲ್ಲಿ ಕಡಿಮೆ ನೋಂದಣಿ ಆಗಿದೆ. ತಿಂಗಳಿಗೆ ಎಷ್ಟು ಜನರ ನೋಂದಣಿ ಆಗುತ್ತಿದೆ ಎಂಬುವುದರ ದತ್ತಾಂಶ ಸಂಗ್ರಹಿಸಿ, ಕ್ರಿಯಾ ಯೋಜನೆ ರೂಪಿಸಬೇಕು ಎಂದರು.

ಜಿಲ್ಲೆಯಲ್ಲಿ 7,31,173 ಜನರ ಆಧಾರ್ ಡಾಕ್ಯೂಮೆಂಟ್ ಅಪ್ಡೇಟ್ ಬಾಕಿ ಇದ್ದು, ಕಳೆದ ಮೂರು ತಿಂಗಳಿಂದ ಕೇವಲ 967 ಜನರು ಡಾಕ್ಯೂಮೆಂಟ್ ಅಪ್ಡೇಟ್ ಮಾಡಿದ್ದಾರೆ. ಈ ಕುರಿತು ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಯುಐಡಿಎಐನ ಪ್ರಾದೇಶಿಕ ಕಚೇರಿಯ ಯೋಜನಾ ವ್ಯವಸ್ಥಾಪಕ ವಿಜಯ್ ಕುಮಾರ್ ಮಾತನಾಡಿ, ಆಧಾರ್ ನೋಂದಣಿ ಹಾಗೂ ಅಪ್ಡೇಟ್‌ಗೆ ಅಗತ್ಯವಿರುವ ಕಿಟ್ ಸರಬರಾಜಿಗೆ ಕ್ರಮವಹಿಸಲಾಗುವುದು. ಶಾಲೆ, ಅಂಗನವಾಡಿಗಳಲ್ಲಿ ವಿಶೇಷ ಶಿಬಿರದ ಮೂಲಕ ಆಧಾರ್ ನೋಂದಣಿಗೆ ಹೆಚ್ಚುವರಿಯಾಗಿ ಆಧಾರ್ ನೋಂದಣಿ ಕಿಟ್‌ಗಳನ್ನು ನೀಡಲಾಗುವುದು ಎಂದು ತಿಳಿಸಿದರು.

ಆಧಾರ್ ಜಿಲ್ಲಾ ಸಂಯೋಜಕ ರಂಗನಾಥ್ ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 80 ಕೇಂದ್ರಗಳಲ್ಲಿ ಆಧಾರ್ ನೋಂದಣಿಯಾಗುತ್ತಿದೆ. ಜಿಲ್ಲೆಯ ಎಲ್ಲ ಕೇಂದ್ರಗಳಲ್ಲಿ ನೋಂದಣಿಯಾಗುವ ಆಧಾರ್‌ನ ಪ್ರತಿ ದಿನದ ಮಾಹಿತಿ ಲಭ್ಯವಾದರೆ, ನಿರ್ವಹಣೆ ಹಾಗೂ ಆಧಾರ್ ನೋಂದಣಿ ಕೇಂದ್ರದ ಅಪರೇಟರ್‌ಗಳಿಗೆ ಸೂಕ್ತ ಸಲಹೆ ಸೂಚನೆ ನೀಡಲು ಅನುಕೂಲವಾಗಲಿದೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ತಿಪ್ಪೇಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ನಿಯಮ ಮತ್ತು ಸೂಚನೆ ಪಾಲಿಸದ ಪೋಲಿಸ್ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ: ಜಿ.ಪರಮೇಶ್ವರ್

» **ಬೆಂಗಳೂರು**



ಬೆಂಗಳೂರು ನಗರದಲ್ಲಿ ಗಿರವಿ ಅಂಗಡಿ ಹಾಗೂ ಚಿನ್ನದ ಅಂಗಡಿ ಮಾಲೀಕರಿಗೆ ರಿಕವರಿ ನೆಪದಲ್ಲಿ ಪೊಲೀಸರು ಯಾವುದೇ ಕಿರುಕುಳ ನೀಡುತ್ತಿರುವುದಿಲ್ಲ. ಉಚ್ಚ ನ್ಯಾಯಾಲಯದ ತೀರ್ಪಿನಂತೆ ಕಾರ್ಯನಿರ್ವಹಣೆ ಮಾಡಲು ಬೆಂಗಳೂರು ಪೊಲೀಸ್ ಆಯುಕ್ತರು ಎಲ್ಲಾ ಅಧಿಕಾರಿಗಳಿಗೆ ಸೂಕ್ತ ತಿಳುವಳಿಕೆಯನ್ನು ನೀಡಿ ಆದೇಶವನ್ನು ಹೊರಡಿಸಿರುತ್ತಾರೆ.

ಮತ್ತೊಮ್ಮೆ ಎಲ್ಲಾ ಅಧಿಕಾರಿ /ಸಿಬ್ಬಂದಿಯವರಿಗೆ ಸೂಚನೆಗಳನ್ನು ನೀಡಲಾಗುವುದು, ಸೂಚನೆಗಳನ್ನು ಪಾಲಿಸದೇ / ಅನುಸರಿಸದೇ ಇರುವ ಅಧಿಕಾರಿ ಸಿಬ್ಬಂದಿಗಳ ವಿರುದ್ಧ ಸೂಕ್ತ ಇಲಾಖಾ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ತಿಳಿಸಿದರು.

ವಿಧಾನಪರಿಷತ್ತಿನ ಸದಸ್ಯರಾದ ಟಿ.ಎ. ಶರವಣ ಅವರು ನಿಯಮ 72ರಡಿ ಮಂಡಿಸಿದ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಸಚಿವರು ಮಹಾ ನಿರ್ದೇಶಕರು ಮತ್ತು ಆರಕ್ಷಕ ನಿರೀಕ್ಷಕರು ರವರ ಪತ್ರದ ಸಂಕ್ಯೆ ಅಪರಾಧ 3/187/2018 ದಿನಾಂಕ: 06-03-2019 ರಂದು ನಿರ್ಧಿಷ್ಟ ಕಾರ್ಯ ವಿಧಾನಗಳ ಬಗ್ಗೆ ಆದೇಶವನ್ನು ಹೊರಡಿಸಿರುತ್ತಾರೆ. ಈ ಆದೇಶದಂತ ಆರೋಪಿಯ ದಸ್ತಗಿರಿ ಸಮಯದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನವನ್ನು ಸಂಪೂರ್ಣವಾಗಿ ಪಾಲಿಸುವುದು. ಕಲಂ 27 ಇಂಡಿಯನ್ ಎವಿಡೆನ್ಸ್ ಕಾಯ್ದೆ ಅಡಿಯಲ್ಲಿ ಆರೋಪಿತನ, ಸ್ವ-ಇಚ್ಛಾ ಹೇಳಿಕೆಯನ್ನು ಪಡೆಯುವಾಗ ವಿಡಿಯೋಗ್ರಾಫ್ ಮಾಡಿಸುವುದು. ಸ್ವ-ಇಚ್ಛಾ ಹೇಳಿಕೆ ಪಡೆಯುವ ಸಮಯದಲ್ಲಿ ಕಡ್ಡಾಯವಾಗಿ ಪಂಚರ ಸಮಕ್ಷಮ ಪಡೆಯುವುದು, ವಿಡಿಯೋಗ್ರಾಫನ್ನು ಮಾಲು ಪಟ್ಟಿಯಲ್ಲಿ ಅಳವಡಿಸಿ ದೋಷಾರೋಪಣ ಪತ್ರದಲ್ಲಿ ಲಗತ್ತಿಸುವುದು.

ಆರೋಪಿತನುಒಂದುಕಡೆಗಿಂತಹೆಚ್ಚುಕಡೆಗಳಲ್ಲಿ ಕಳ್ಳತನ/ರಾಬರಿ/ಡಕಾಯಿತಿ ಮಾಡಿರುವ ಬಗ್ಗೆ ಹೇಳಿಕೆ ನೀಡಿದಲ್ಲಿ, ಸಂಬಂಧಿಸಿದ ಸ್ಥಳಗಳ ಪರಿಶೀಲನೆಯನ್ನು ಕಡ್ಡಾಯವಾಗಿ ಮಾಡಿ ಕೃತ್ಯವೆಸಗಿರುವುದು ಖಾತ್ರಿಯಾದ ನಂತರ ಸದರಿ ಸ್ಥಳದ ಪಂಚನಾಮೆಯನ್ನು ಜರುಗಿಸುವುದು. ಆರೋಪಿತನ ಹೇಳಿಕೆಯನ್ನು ಆಧರಿಸಿ ಪರಿಶೀಲಿಸಿದ ಸ್ಥಳಗಳಲ್ಲಿ ನಡೆದ ಅಪರಾಧ ಪ್ರಕರಣಗಳಿಗೆ ಸಂಬಂಧಿಸಿದಂತೆ ಸದರಿ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಪ್ರಥಮ ವರ್ತಮಾನದ ವರದಿಗಳನ್ನು ಸಂಗ್ರಹಿಸತಕ್ಕದ್ದು. ಆರೋಪಿತನು ತಾನು ಕಳವು ಮಾಲನ್ನು ಸ್ವೀಕರಿಸಿದವರ ಕುರಿತು ಮಾಹಿತಿಯನ್ನು ನೀಡುವಾಗ ಅವನು ಸತ್ಯವನ್ನು ಹೇಳುತ್ತಿದ್ದಾನೆಯೇ ಎಂಬ ಬಗ್ಗೆ ವಿವಿಧ ಕೋನಗಳಿಂದ ಪರಿಶೀಲಿಸಿ ಖಾತ್ರಿಪಡಿಸಿಕೊಳ್ಳುವುದು.

ಆರೋಪಿತನು ನೀಡಿದ ಸ್ವ-ಇಚ್ಛಾ ಹೇಳಿಕೆ ಮತ್ತು ಕಳವು ಮಾಲನ್ನು ಸ್ವೀಕರಿಸಿದ ವ್ಯಕ್ತಿಗಳ ಮಾಹಿತಿಯನ್ನು ಒಳಗೊಂಡ ಪೂರ್ಣ ವಿವರಗಳನ್ನು ತನಿಖಾಧಿಕಾರಿಯು ಹಿರಿಯ ಪೊಲೀಸ್ ಅಧಿಕಾರಿಗಳ ಗಮನಕ್ಕೆ ತರುವುದು. ಪ್ರತಿಯೊಂದು ಪ್ರಥಮ ವರ್ತಮಾನ ವರದಿಯಲ್ಲಿ ಕಳುವಾಗಿರುವ ಒಡವೆಗಳು ವಸ್ತುಗಳ ಪೂರ್ಣ ಮಾಹಿತಿಯನ್ನು ಪಟ್ಟಿ ಮಾಡಿಕೊಳ್ಳುವುದು. ಕಳವು ಮಾಲನ್ನು ಅಮಾನತುಪಡಿಸಿಕೊಳ್ಳಲು ಆರೋಪಿ ಮತ್ತು ಪಂಚರ ಜೊತೆ ತನಿಖಾಧಿಕಾರಿಯು ಹೋಗುವಾಗ ಕಡ್ಡಾಯವಾಗಿ ಸಮವಸ್ತ್ರ ಧರಿಸಿರಬೇಕು ಹಾಗೂ ನಾಮಫಲಕ

ಆರೋಪಿತನುಒಂದುಕಡೆಗಿಂತಹೆಚ್ಚುಕಡೆಗಳಲ್ಲಿ ಕಳ್ಳತನ/ರಾಬರಿ/ಡಕಾಯಿತಿ ಮಾಡಿರುವ ಬಗ್ಗೆ ಹೇಳಿಕೆ ನೀಡಿದಲ್ಲಿ, ಸಂಬಂಧಿಸಿದ ಸ್ಥಳಗಳ ಪರಿಶೀಲನೆಯನ್ನು ಕಡ್ಡಾಯವಾಗಿ ಮಾಡಿ ಕೃತ್ಯವೆಸಗಿರುವುದು ಖಾತ್ರಿಯಾದ ನಂತರ ಸದರಿ ಸ್ಥಳದ ಪಂಚನಾಮೆಯನ್ನು ಜರುಗಿಸುವುದು.

## ಸಮಾಜದ ಮಕ್ಕಳು ಶಿಕ್ಷಣವಂತರ ಆದಾಗ ಮಾತ್ರ ಸಮಾಜ ಪ್ರಗತಿ



» **ಚಿತ್ರದುರ್ಗ**

ಸಮಾಜದ ಮಕ್ಕಳು ಶಿಕ್ಷಣವಂತರಾದಾಗ ಮಾತ್ರ ಸಮಾಜ ಪ್ರಗತಿ ಹೊಂದಲು ಸಾಧ್ಯವಿದೆ. ಇದರೊಂದಿಗೆ ನಮ್ಮ ಪಾಲಿನ ಹಕ್ಕನ್ನು ಪಡೆಯಲು ಸಾಧ್ಯವಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ತಂಗಡಗಿ ತಿಳಿಸಿದರು. ನಗರದ ಹೂರವಲಯದ ಶ್ರೀ ಜಗದ್ಗುರು ಸಿದ್ದರಾಮೇಶ್ವರ ಮಹಾಸಂಸ್ಥಾನದ ಬೋವಿ ಗುರುಪೀಠದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಗದ್ಗುರು ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳ 25ನೇ ಲಾಂಛನ ದೀಕ್ಷಾ ಮಹೋತ್ಸವ, 14 ನೇ ಪಟ್ಟಾಭೀಷೇಕ ಮಹೋತ್ಸವ 38ನೇ ಜನ್ಮದಿನೋತ್ಸವ, ಪ್ರತಿಭಾ ಪುರಸ್ಕಾರ ಹಾಗೂ ವಧು-ವರರ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದರು.

ಕಳೆದ 14 ವರ್ಷದ ಹಿಂದೆ ನಮ್ಮ ಸಮಾಜದ ಶ್ರೀಗಳು ಲಿಂಗೈಕ್ಯರಾದ ಮೇಲೆ ಸಮಾಜಕ್ಕೆ ಯಾರನ್ನು ಸ್ವಾಮಿಗಳನ್ನಾಗಿ ಮಾಡಬೇಕೆಂದು ಸಮಾಜದ ಮುಖಂಡರು ಚಿಂತನೆಯನ್ನು ನಡೆಸಿದಾಗ ಚಿತ್ರದುರ್ಗದಲ್ಲಿದ್ದ ಈ ಶ್ರೀಗಳು ಕಣ್ಣಿಗೆ ಬಿದ್ದರು ಅವರನ್ನು ನಮ್ಮ ಸಮಾಜದ ಗುರುಗಳನ್ನಾಗಿ ಮಾಡಿ ಬಾಗಲಕೋಟೆ ಮತ್ತು ಚಿತ್ರದುರ್ಗದ ಎರಡು ಮಠದ ಜವಾಬ್ದಾರಿಯನ್ನು ಹೊರೆಸಲಾಯಿತು. ಚಿಕ್ಕ ವಯಸ್ಸಿನಲ್ಲಿಯೇ ಸಮಾಜದ ಜವಾಬ್ದಾರಿಯನ್ನು ಹೊತ್ತ ಶ್ರೀಗಳು ಈಗ ಉತ್ತಮವಾದ ಸಮಾಜವನ್ನು ನಿರ್ಮಾಣ ಮಾಡುವಲ್ಲಿ ಶ್ರಮವನ್ನು ಹಾಕಿದ್ದಾರೆ, ಎರಡು ಮಠಗಳನ್ನು ಸಹಾ ಅಭೀವೃದ್ದಿ ಮಾಡಿದ್ದಾರೆ ಎಂದರು.

**ಪ್ರಮುಖ ಸುದ್ದಿ**

# ಪತ್ರಿಕಾ ದಿನಾಚರಣೆ, ಸಾಧಕರ ಸನ್ಮಾನ ಸಮಾರಂಭ

» **ದಾವಣಗೆರೆ**



ನಗರದ ಗುರುಭವನದಲ್ಲಿ ಕಾನಿಪ ಧ್ವನಿ ದಾವಣಗೆರೆ ಜಿಲ್ಲಾ ಹಾಗೂ ತಾಲೂಕು ಘಟಕಗಳಿಂದ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಹಾಗೂ ಸಾಧಕರ ಸನ್ಮಾನ ಸಮಾರಂಭದ ಉದ್ಘಾಟನೆಯನ್ನು ದಾವಣಗೆರೆ ದಕ್ಷಿಣ ಕ್ಷೇತ್ರದ ಶಾಸಕರು ಹಾಗೂ ವೀರಶೈವ ಮಹಾಸಭಾದ ರಾಜ್ಯಾಧ್ಯಕ್ಷರಾದ ಶ್ಯಾಮನೂರು ಶಿವಶಂಕಪ್ಪ ನವರು ಉದ್ಘಾಟಿಸಿ, ರಾಜ್ಯದ ನೊಂದಂತ ಪತ್ರಕರ್ತರ ಪರ ಧ್ವನಿ ಎತ್ತಿ ಸಾಗುತ್ತಿರುವ ಕಾನಿಪ ಧ್ವನಿ ಯಿಂದ ಸದಾ ನಾನು ಇರುತ್ತೇನೆ ಜೊತೆಗೆ ಪತ್ರಕರ್ತರರೆಲ್ಲರೂ ಪತ್ಯಕ್ಷ ಕಂಡರೂ ಪ್ರಮಾಣಿಸಿ ನೋಡಿ ವರದಿ ಮಾಡಬೇಕು. ನೊಂದಂತ ಜನತೆಗೆ ಸದಾ ಬೆಳಕು ಮೂಡಿಸುವಂತ ಕಾರ್ಯದ ಮುಖಾಂತರ ಸಾಗಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾನಿಪ ಧ್ವನಿ ರಾಜ್ಯ ಉಪಾಧ್ಯಕ್ಷರಾದ ಡಾ.ವಾಸುದೇವ ರವರು ವಹಿಸಿದ್ದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದಂತ ಮಾಯಕೊಂಡ ಕ್ಷೇತ್ರದ ಶಾಸಕರಾದ ಮಾನ್ಯ ಬಸವಂತಪ್ಪ ನವರು ಮಾತನಾಡಿ ನಮ್ಮ ಸರ್ಕಾರ 5 ಗ್ಯಾರೆಂಟಿಗಳನ್ನು ಜನತೆಗೆ ಕೊಟ್ಟಂತ ಬೇಡಿಕೆಗಳ ಈಡೇರಿಸುವಂತ ಕಾರ್ಯದಲ್ಲಿ ಈಗಾಗಲೇ ಸಾಗಿದ್ದು ನುಡಿದಂತೆ ನಡೆಯುತ್ತಿದ್ದೇವೆ. ಪತ್ರಕರ್ತರುಗಳಿಗೆ ಸದಾ ನಾನು ಬೆನ್ನೆಲುಬಾಗಿರುತ್ತೇನೆ ಜೊತೆಗೆ ಯಾವದೇ ಕಷ್ಟ ಸುಖಗಳಿಗೆ ನಾನು ಸ್ಪಂಧಿಸುತ್ತೇನೆ ಎಂಬ ನುಡಿಗಳಿಗೆ ಕಾನಿಪ ಧ್ವನಿ ರಾಜ್ಯಾಧ್ಯಕ್ಷರಾದ ಬಂಗ್ಲೆ ಮಲ್ಲಿಕಾರ್ಜುನ ರವರು ಪ್ರತಿಕ್ರಯಿಸಿ ತಮ್ಮ ಬಾಷಣದಲ್ಲಿ ಈ ಹಿಂದೆ ಇದ್ದ ಬೊಮ್ಮಾಯಿ ಸರ್ಕಾರ ರಾಜ್ಯದ ಪತ್ರಕರ್ತರಿಗೆ ದೊಡ್ಡ ಚೊಂಬನ್ನು ನೀಡಿದ್ದು, ಈಗಿರುವ ಕಾಂಗ್ರೇಸ್‌ನ ಸಿದ್ದರಾಮಣ್ಣನ ಸರ್ಕಾರ ಪತ್ರಕರ್ತರ ತುಟಿಗೆ ತುಪ್ಪವನ್ನು ಸವರಿದಂತೆ, ನಿವೃತ್ತ ಸಂಕಷ್ಟದಲ್ಲಿರುವ ಪತ್ರಕರ್ತರ ಮಾಸಾಶನವನ್ನು ಎರೆಡು ಸಾವಿರ ರೂಗಳನ್ನು ಹೆಚ್ಚಿಸಿದ್ದು ಬಿಟ್ಟರೆ, ಪ್ರಮುಖ ಬೇಡಿಕೆಗಳಾದ ಪತ್ರಕರ್ತರ ರಕ್ಷಣಾ ಕಾಯ್ದೆ, ಜೀವವಿಮಾ, ಆರ್ಥಿಕ ಭದ್ರತೆಗೆ ಗಮನವನ್ನೇ ಕೊಟ್ಟಿಲ್ಲ. ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷ ಕಳೆಯುತ್ತಾ ಬಂದಿದ್ದರೂ ಕರ್ನಾಟಕದಲ್ಲಿ ಪತ್ರಕರ್ತರಿಗೆ ಮಾತ್ರಸ್ವಾತಂತ್ರ್ಯ ಇಂದಿಗೂ ಸಿಗದಿರುವುದು ವಿಷಾದನೀಯ. ಹಲವಾರು ವರ್ಷಗಳಿಂದ ಬಸ್ ಪಾಸ್ ಗಾಗಿ ಹೋರಾಟ ಮಾಡುತ್ತಾ ಬಂದಿದ್ದರೂ ಪ್ರಯೋಜನವಾಗಿಲ್ಲ. ಮಂಗಳಮುಖಿಯರ ಮೇಲಿರುವ ಕಾಳಜಿ ಪತ್ರಕರ್ತರ ಮೇಲೆ ಸಿದ್ದರಾಮಣ್ಣನ ಸರ್ಕಾರ ಕ್ಕೆ ಖಂಡಿತವಾಗಿಯೂ ಇಲ್ಲ. ಬೆಂಗಳೂರಿನಲ್ಲಿ ಇರುವಂತ ನಾನ್ ಅಕ್ರಿಡೇಟ್ ಜರ್ನಲಿಸ್ಟ್ ಗಳೆಲ್ಲರಿಗೂ 600 ರೂಗಳು ಬಿ.ಎಂ.ಟಿ.ಸಿ. ಗೆ ಪಾವತಿಸಿದರೆ ವರ್ಷಪೂರ್ತಿ ಆರ್.ಎನ್.ಐ. ಹೊಂದಿರುವಂತ ಪತ್ರಕರ್ತರು ಪ್ರಯಾಣಿಸುವ ಅವಕಾಶದ ಆದೇಶವನ್ನು ಸರ್ಕಾರ ಒದಗಿಸಿದೆ.ರಾಜ್ಯದ ಇನ್ನೀತರ ಜಿಲ್ಲೆಗಳಿಗೆ ಈ ಸೌಲಭ್ಯ ಯಾಕೆ ಇಲ್ಲ ಎಂಬ ಪ್ರಶ್ನೆಯ ಜೊತೆಗೆ ಸರ್ಕಾರ ಒಂದು ಜಿಲ್ಲೆಗೆ ಬೆಣ್ಣೆ ಕೆಲ ಜಿಲ್ಲೆಗಳಿಗೆ ಸುಣ್ಣ ಎನ್ನುವಂತ ನೀತಿ ಅನುಸರಿಸಿದ ಕ್ರಮ ಸರಿ ಇಲ್ಲದ ಕಾರಣ ಮಾನ್ಯ ಕಾಂಗ್ರೇಸ್ ಶಾಸಕರಾದ ಬಸವಂತಪ್ಪ ನವರು ಪತ್ರಕರ್ತರಿಗೆ ಸದಾ ಬೆಂಬಲವಾಗಿರುತ್ತೇವೆ ಎಂಬ ನುಡಿಗಳಿಗೆ, ಬಸ್ ಪಾಸ್ ವಿಚಾರಕ್ಕೆ ಸಂಬಂಧಿಸಿದಂತೆ ಬೆಂಗಳೂರು ನಗರಕ್ಕೆ ಪತ್ರಕರ್ತರಿಗೆ ನೀಡಿರುವಂತ ಬಸ್ ಪಾಸ್ ಸೌಲಭ್ಯವನ್ನು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರನ್ನು ಹಾಗೂ ಸಾರಿಗೆ ಸಚಿವರಾದ ರಾಮಲಿಂಗರೆಡ್ಡಿಯವರ ಗಮನಕ್ಕೆ ತಂದು ಮನವೊಲಿಸಿ ಸೌಲಭ್ಯ ಒದಗಿಸಿದ್ದೇ ಆದರೆ ಮಾನ್ಯ ಶಾಸಕರಾದ ಬಸವಂತಪ್ಪ ರವರಿಗೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಅದ್ದೂರಿ ಸನ್ಮಾನವನ್ನು ಸಮಸ್ತ ಪತ್ರಕರ್ತರ ಸಮಕ್ಷಮದಲ್ಲಿ ಕಾನಿಪ ಧ್ವನಿ ಸಂಘಟನೆ ಮಾಡಲಿದೆ ಎಂಬ ಬಂಗ್ಲೆ ಮಲ್ಲಿಕಾರ್ಜುನ ರವರ ಸವಾಲಿಗೆ ಶಾಸಕರು ಕೊನೆಯಲ್ಲಿ ಒಪ್ಪಿ ಭಗೀರಥ ಪ್ರಯತ್ನದೊಂದಿಗೆ ಬಸ್ ಪಾಸ್ ಸೌಲಭ್ಯವನ್ನು ಮುಖ್ಯಮಂತ್ರಿ ಹಾಗೂ ಸಾರಿಗೆ ಸಚಿವರೊಂದಿಗೆ ಮಾತು ಕತೆ ನಡೆಸಿ ಒದಗಿಸಿ ಕೊಡುತ್ತೇನೆ ಎಂದು ಸಮಾರಂಭದಲ್ಲಿ ನೆರೆದಿದ್ದ ಪತ್ರಕರ್ತರಿಗೆ ಮಾತು ನೀಡಿದ್ದು ಸಮಾರಂಭದ ವಿಶೇಷವಾಗಿತ್ತು.ಸಮಾರಂಭದಲ್ಲಿಅತಿಹೆಚ್ಚು ಅಂಕ ಪಡೆದಂತ ವಿಧ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಕನ್ನಡ ಪ್ರಭ ಪತ್ರಿಕೆ ವರದಿಗಾರ ನಾಗರಾಜ್ ಬಡದಾಳ್, ಶುಭಾಷಿತ ಪತ್ರಿಕೆ ಸಂಪಾದಕರಾದ ಕೆ.ಜೈಮುನಿ, ಮಂಜು ಮುದ್ರಣ ನಾಗರಾಜ್ ಸನ್ಮಾನಿಸಲಾಯಿತು. ಕಾರ್ಯಕ್ರಮದ ಪ್ರಾರ್ಥನೆಯನ್ನು ಅಣ್ಣಪ್ಪ ನವರು ಹಾಡಿನ ಮುಖಾಂತರ ಗಮನ ಸೆಳೆದರು. ಕೊನೆಯಲ್ಲಿ ಜಿಲ್ಲಾಧ್ಯಕ್ಷರಾದ ನಾಗರಾಜ್ ಭಜರಂಗಿ ವಂದನಾರ್ಪಣೆ ಮಾಡಿದರು. ಸುಕನ್ಯ ಕಾರ್ಯಕ್ರಮ ನಿರೂಪಿಸಿದರು.

ಮುಖ್ಯ ಅತಿಥಿಗಳಾಗಿ ಕನ್ನಡ ಪರ ಹೋರಾಟಗಾರ ಟಾರ್ಗೆಟ್ ಅಸ್ಲಂ, ತಂಜೀಮುಲ್ ಮುಸ್ಲಿಂಮೀನ್ ಫಂಡ್ ಅಸೋ ಸಿಯೇಷನ್ ಅಧ್ಯಕ್ಷ ದಾದುಶೇಟ್, ಪಾಲಿಕೆ ಸದಸ್ಯರಾದ ಕೆ. ಚಮನ್ಸಾಬ್, ಎ. ನಾಗರಾಜ್, ಗೌರವ ಸಲಹೆಗಾರ ಅಬ್ದುಲ್ ಮಜೀದ್, ಜಿಲ್ಲಾಧ್ಯಕ್ಷ ಜಿ.ಹೆಚ್. ನಾಗರಾಜ್ ಆವರಗೆರೆ, ಡಿಎಸ್‌ಎಸ್ ಮಲ್ಲೇಶ್, ಗುರುಕುಲ ಶಾಲೆಯ ಮುಖ್ಯಸ್ಥ ಅಬ್ದುಲ್, ಎ.ಎಂ. ಕೊಟ್ರಯ್ಯ, ಸಂತೋಷ್ ದೊಡ್ಡಮನಿ,ಬಿ.ಅಲ್ಲಾಭಕ್ಷಿ ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T